

MUNJANE VARTHE

MAG(2) PRB/CR/70/2022-23 REG NO: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjaneevartheepaper.com EDITOR: H.L.AMARANATH

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ

Volume: 02 Issue: 92 | ಸಂಪುಟ: 02 | ಸಂಚಿಕೆ: 92 | ಪುಟಗಳು: 04 | munjanevarthe | 14 TUESDAY MAY 2024 | 14 ಮಂಗಳವಾರ ಮೇ 2024 | ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

website: munjanevarthe.com



ಸಹಕಾರ ಸಂಘಗಳು ಸಂಕಷ್ಟದಲ್ಲಿವೆ: ಡಾಲು ರವಿ ವಿವರಪುಟ 02

ಜಮೀನು ಮಾರುವುದನ್ನು ಮೊದಲು ನಿಲ್ಲಿಸಿ: ಆದಿ ಚುಂಚನಗಿರಿ ಶ್ರೀ ವಿವರಪುಟ 03

ತಾಯಂದಿರ ದಿನಾಚರಣೆ ಅಂಗವಾಗಿ "ಅಮ್ಮ ನಮನ ವಿವರಪುಟ 04


ನಾಲ್ಕನೇ ಹಂತದಲ್ಲಿ 96 ಸ್ಥಾನಗಳಿಗೆ ಮತದಾನ ನಡೆದಿದೆ. ಇದರೊಂದಿಗೆ 23 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಾದ್ಯಂತ 379 ಸ್ಥಾನಗಳಲ್ಲಿ ಮತದಾನ ಪೂರ್ಣಗೊಂಡಿದೆ. ಆಂಧ್ರ ಪ್ರದೇಶ, ಸಿಕ್ಕಿಂ ಮತ್ತು ಅರುಣಾಚಲ ಪ್ರದೇಶದ ರಾಜ್ಯ ವಿಧಾನಸಭಾ ಚುನಾವಣೆಗಳಲ್ಲಿಯೂ ಮತದಾನ ಮುಕ್ತಾಯವಾಗಿದೆ. ನಾಲ್ಕನೇ ಹಂತದಲ್ಲಿ 10 ರಾಜ್ಯಗಳ 96 ಸ್ಥಾನಗಳಿಗೆ ಮತದಾನ ನಡೆದಿದೆ. ಮೊದಲ ಹಂತದ ಲೋಕಸಭಾ ಚುನಾವಣೆಯಲ್ಲಿ ಶೇ. 66. 14 ರಷ್ಟು ಮತದಾನವಾಗಿತ್ತು.

# ನಾಲ್ಕನೇ ಹಂತದ ಮತದಾನ ಶಾಂತಿಯುತ

ನವದೆಹಲಿ: ಸೋಮವಾರ ನಡೆದ ಲೋಕಸಭೆ ಚುನಾವಣೆಯ ನಾಲ್ಕನೇ ಹಂತದಲ್ಲಿ ರಾತ್ರಿ 8 ಗಂಟೆಯವರೆಗೂ ಶೇ 62. 84 ರಷ್ಟು ಮತದಾನವಾಗಿದೆ. 2019ರ ಚುನಾವಣೆಗೆ ಹೋಲಿಸಿದರೆ ಶೇ. 2. 5 ರಷ್ಟು ಕಡಿಮೆಯಾಗಿದೆ. ಆಗ ಶೇ. 65. 51 ರಷ್ಟು ಮತದಾನವಾಗಿತ್ತು ಎಂದು ಭಾರತೀಯ ಚುನಾವಣಾ ಆಯೋಗ ತಿಳಿಸಿದೆ.



ನಾಲ್ಕನೇ ಹಂತದಲ್ಲಿ 96 ಸ್ಥಾನಗಳಿಗೆ ಮತದಾನ ನಡೆದಿದೆ. ಇದರೊಂದಿಗೆ 23 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಾದ್ಯಂತ 379 ಸ್ಥಾನಗಳಲ್ಲಿ ಮತದಾನ ಪೂರ್ಣಗೊಂಡಿದೆ.

ಆಂಧ್ರ ಪ್ರದೇಶ, ಸಿಕ್ಕಿಂ ಮತ್ತು ಅರುಣಾಚಲ ಪ್ರದೇಶದ ರಾಜ್ಯ ವಿಧಾನಸಭಾ ಚುನಾವಣೆಗಳಲ್ಲಿಯೂ ಮತದಾನ ಮುಕ್ತಾಯವಾಗಿದೆ.

ನಾಲ್ಕನೇ ಹಂತದಲ್ಲಿ 10 ರಾಜ್ಯಗಳ 96 ಸ್ಥಾನಗಳಿಗೆ ಮತದಾನ ನಡೆದಿದೆ. ಮೊದಲ ಹಂತದ ಲೋಕಸಭಾ ಚುನಾವಣೆಯಲ್ಲಿ ಶೇ. 66. 14 ರಷ್ಟು ಮತದಾನವಾಗಿತ್ತು.

ಏಪ್ರಿಲ್ 26 ರಂದು ನಡೆದ ಎರಡನೇ ಹಂತದಲ್ಲಿ ಶೇ. 66. 71, ಮೂರನೇ ಹಂತದಲ್ಲಿ ಶೇ. 65. 68ರಷ್ಟು ಮತದಾನವಾಗಿತ್ತು.

ಚುನಾವಣಾ ಪತ್ರಗಳ ಪರಿಶೀಲನೆಯು ಮತದಾನ ದಿನದ ನಂತರ ಒಂದು ದಿನದ ನಂತರ ಅಭ್ಯರ್ಥಿಗಳು ಅಥವಾ ಅವರ ಅಧಿಕೃತ ಪೋಲಿಂಗ್ ಏಜೆಂಟರ ಸಮ್ಮುಖದಲ್ಲಿ ನಡೆಯುತ್ತದೆ. ಯಾವುದೇ ಕ್ಷೇತ್ರದಲ್ಲಿ ಮರು ಮತದಾನ ನಡೆಸುವ ನಿರ್ಧಾರವನ್ನು ಸಹ ನಂತರ ತೆಗೆದುಕೊಳ್ಳಲಾಗುತ್ತದೆ ಎಂದು ಚುನಾ ವಣಾ ಸಮಿತಿ ತಿಳಿಸಿದೆ.

# ನಾಪತ್ತೆಯಾಗಿದ್ದ ಮಕ್ಕಳು ಶವವಾಗಿ ಪತ್ತೆ

ವಿಜಯಪುರ: ನಗರದ ಹೊರವಲಯದ ಇಂಡಿ ರಸ್ತೆಯಲ್ಲಿರುವ ತ್ಯಾಜ್ಯ ನೀರು ಸಂಸ್ಕರಣಾ ಘಟಕದಲ್ಲಿ ಮುಳುಗಿ ಮೂವರು ಮಕ್ಕಳು ಸಾವನ್ನಪ್ಪಿರುವ ದಾರುಣ ಘಟನೆ ನಡೆದಿದೆ. ಭಾನುವಾರ ಬೆಳಗ್ಗೆ ನಾಪತ್ತೆಯಾಗಿದ್ದ ಮಕ್ಕಳು ಸೋಮವಾರ ಶವವಾಗಿ ಪತ್ತೆಯಾಗಿದ್ದು, ಗಿಡಗಳಲ್ಲಿ ಸಿಲುಕಿಕೊಂಡಿದ್ದ ಅವರ ಶವಗಳನ್ನು ವಶಕ್ಕೆ ಪಡೆಯಲಾಗಿದೆ.

ಮೃತರನ್ನು ಅನುಷ್ಕಾ ದಹಿಂದೆ (9), ವಿಜಯ್ ದಹಿಂದೆ (7) ಸಹೋದರ ಮತ್ತು ಮಿಹಿರ್ ಜನಗೌಲಿ (7) ಎಂದು ಗುರುತಿಸಲಾಗಿದೆ. ಮೊದಲ ಇಬ್ಬರು ಮಕ್ಕಳು ತಮ್ಮ ಸಂಬಂಧಿಕರ ಮನೆಗೆ ಬಂದಿದ್ದ ಗದಗ ಜಿಲ್ಲೆಯ ನಿವಾಸಿಗಳಾಗಿದ್ದರೆ, ಮತ್ತೊಬ್ಬರು ವಿಜಯಪುರ ನಗರದ ನಿವಾಸಿಯಾಗಿದ್ದಾರೆ.

ಎಲ್ಲಾ ಮಕ್ಕಳು ಆಶ್ರಮ ರಸ್ತೆಯ ಚಬುಕ್ಸಾವರ್ ದರ್ಗಾದಲ್ಲಿರುವ ಮನೆಯಿಂದ ನಾಪತ್ತೆಯಾಗಿದ್ದರು. ಪೊಲೀಸರ ಪ್ರಕಾರ, ಭಾನುವಾರ ಬೆಳಗ್ಗೆ 10.00 ಗಂಟೆ ಸುಮಾರಿಗೆ ಮಕ್ಕಳು ಮನೆಯಿಂದ ಒಂಟೆ ಸವಾರಿಗೆ ತೆರಳಿದ್ದರು. ಸವಾರಿ ಬಳಿಕ ಮಕ್ಕಳು ಒಂಟೆಯನ್ನು ಹುಡುಕಲು ಹೋದರು ಎಂದು ವರದಿಯಾಗಿದೆ.

# ದೇವರಾಜೇಗೌಡ ಪೊಲೀಸ್ ಕಸ್ಟಡಿಗೆ

ಹಾಸನ: ಬಿಜೆಪಿ ಮುಖಂಡ, ವಕೀಲ ದೇವರಾಜೇಗೌಡಗೆ 3 ದಿನ ಪೊಲೀಸ್ ಕಸ್ಟಡಿಗೆ ನೀಡಿ ಹೊಳೆನರಸೀ ಪುರ ಜೆಎಂಎಫ್ ಸಿ ಕೋರ್ಟ್ ನ್ಯಾಯಾಧೀಶರಾದ ಪ್ರವೀಣ್ ರಿಂದ ಆದೇಶ ಹೊರಡಿಸಲಾಗಿದೆ. ಹೆಚ್ಚಿನ ವಿಚಾರಣೆಗಾಗಿ ಹೊಳೆನರಸೀಪುರ ಪೊಲೀಸರು ಕಸ್ಟಡಿಗೆ ಕೇಳಿದ್ದ ಅರ್ಜಿ ಪರಿಗಣಿಸಿ 3 ದಿನ ಅಂದರೆ ನಾಳೆ ಬೆಳಗ್ಗೆ 9ರಿಂದ ಮೇ 16ರ ರಾತ್ರಿವರೆಗೆ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಅತ್ಯಾಚಾರ ಪ್ರಕರಣದಲ್ಲಿ ಮೇ 11ರಂದು ದೇವರಾಜೇಗೌಡರ ಬಂಧಿಸಲಾಗಿತ್ತು.

14 ದಿನಗಳ ಕಾಲ ನ್ಯಾಯಾಂಗ ಬಂಧನ ಹಿನ್ನೆಲೆಯಲ್ಲಿ ದೇವರಾಜೇಗೌಡರನ್ನು ಹಾಸನ ಜಿಲ್ಲಾ ಕಾರಾಗೃಹಕ್ಕೆ ಶಿಫ್ಟ್ ಮಾಡಲಾಗಿತ್ತು. ಈ ವೇಳೆ ಇನ್ನು ಎಂಟು ದಿನಗಳಲ್ಲಿ ಜೈಲಿನಿಂದ ಹೊರಗೆ ಬರ್ತೀನಿ, ಸತ್ಯಕ್ಕೆ ಜಯ ಸಿಕ್ಕೇ ಸಿಗುತ್ತೆ ಅಂತಾ ಹೇಳಿದ್ದರು.



ಬಿಜೆಪಿ ಮುಖಂಡ ದೇವರಾಜೇಗೌಡ ಬಂಧನ ಹಿಂದೆ ರಾಜಕೀಯ ಷಡ್ಯಂತ್ರ ಅಡಗಿದ್ಯಾ? ಅನ್ನೋ ಅನುಮಾನವೂ ಶುರುವಾಗಿದೆ. ಯಾಕೆಂದ್ರೆ ಪೆನ್ ಡ್ರೈವ್ ಪ್ರಕರಣದಲ್ಲಿ ಮಹತ್ವದ ದಾಖಲೆಯೇ ಬಿಡುಗಡೆ ಮಾಡಿದ್ರು, ಇಷ್ಟೇ ಅಲ್ಲ, ಆಡಿಯೋ ಬಾಂಬ್ ಕೂಡ ಹಾಕಿದ್ದರು. ಡಿಸಿಎಂ ಡಿಕೆ.ಶಿವಕುಮಾರ್ ವಿರುದ್ಧ ಆರೋಪ ಕೂಡ ಮಾಡಿದ್ದರು.

ಇದೇ ಕಾರಣದಿಂದಲೇ ಜೈಲು ಪಾಲಾದ್ರಾ ಅನ್ನೋ ಗುಮಾನಿಯೂ ಎದ್ದಿದೆ.

ಯಾಕೆಂದ್ರೆ ಮೂಲಕ ದೂರಿನಲ್ಲಿ ಅತ್ಯಾಚಾರ ಕೇಸ್ ದಾಖಲಾಗಿರಲಿಲ್ಲ. ಬಳಿಕ ಹಳೇ ಕೇಸ್‌ಗೆ ಮತ್ತೊಂದು ಸೆಕ್ಷನ್ ಸೇರಿಸಿ ಅರೆಸ್ಟ್ ಮಾಡಲಾಗಿದೆ ಅಂತೆ. ದೂರು ನೀಡಿ ತಿಂಗಳ ಬಳಿಕ ಅತ್ಯಾಚಾರ ಸೆಕ್ಷನ್ ಸೇರಿಸಲಾಗಿದೆ.

# ರೇವಣ್ಣಗೆ ಜಾಮೀನು ಮಂಜೂರು

ಬೆಂಗಳೂರು: ಕೆ.ಆರ್.ನಗರ ಸಂತ್ರಸ್ತೆಯನ್ನು ಅಪಹರಣ ಮಾಡಿಸಿದ ಆರೋಪದ ಮೇಲೆ ಪರಪ್ಪನ ಅಗ್ರಹಾರ ಜೈಲಲ್ಲಿರುವ ಮಾಜಿ ಮಂತ್ರಿ ಹೆಚ್‌ಡಿ ರೇವಣ್ಣಗೆ ಕಡೆಗೂ ತಾತ್ಕಾಲಿಕ ರಿಲೀಫ್ ಸಿಕ್ಕಿದೆ.

ಬೆಳಗ್ಗೆಯಿಂದ ಸಂಜೆ 4 ಗಂಟೆಯವರೆಗೆ ಜಾಮೀನು ಅರ್ಜಿಯ ಸುದೀರ್ಘ ವಿಚಾರಣೆ ನಡೆಸಿದ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಸಂಜೆ 6:30ಕ್ಕೆ ರೇವಣ್ಣಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಸಂಜೆಯಾದ ಕಾರಣ ಕೋರ್ಟ್ ಷರತ್ತುಗಳನ್ನು ಪೂರೈಸಲು ಆಗಲಿಲ್ಲ. ಹೀಗಾಗಿ ನಾಳೆ ಬೆಳಗ್ಗೆ ಕೋರ್ಟ್ ಕಲಾಪ ಶುರುವಾದ ನಂತರ ಜಾಮೀನು ಷರತ್ತುಗಳನ್ನು ಪೂರೈಸಿದ ನಂತರ ಪರಪ್ಪನ ಅಗ್ರಹಾರ ಜೈಲಿಂದ ಹೆಚ್‌ಡಿ ರೇವಣ್ಣ ರಿಲೀಸ್ ಆಗಲಿದ್ದಾರೆ. ಇದರೊಂದಿಗೆ ರೇವಣ್ಣ ಅವರ ಆರು ದಿನಗಳ ಜೈಲುವಾಸ ಅಂತ್ಯವಾಗಲಿದೆ.

ವಿಚಾರಣೆ ವೇಳೆ ತನಿಖಾ ಪ್ರಗತಿಯ ವರದಿಯನ್ನು ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯದಲ್ಲಿ ಸಲ್ಲಿಕೆ ಮಾಡಿದ ಕ್ರಮವನ್ನು ರೇವಣ್ಣ ಪರ ವಕೀಲರು ಆಕ್ಷೇಪಿಸಿದರು.

ಕೊನೆಗೆ ಜಡ್ಜ್ ಸೂಚನೆ ಮೇರೆಗೆ ತನಿಖಾ ವರದಿಯ ಪ್ರತಿಯನ್ನು ರೇವಣ್ಣ ಪರ ವಕೀಲರಿಗೆ ವಿಶೇಷ ಸಾರ್ವಜನಿಕ ಅಭಿಯೋಜಕ ನೀಡಿದರು.

ರೇವಣ್ಣಗೆ ಯಾವುದೇ ಕಾರಣಕ್ಕೂ ಜಾಮೀನು ನೀಡಬಾರದು ಎಂದು ಎಸ್‌ಪಿಪಿ ಪ್ರಬಲ ವಾದ ಮಂಡಿಸಿದರು.

ಯಾಕೆ ಜಾಮೀನು ನೀಡಬಾರದು ಎಂಬುದನ್ನೆಲ್ಲಾ ವಿವರಿಸಿದರು. ಇದಕ್ಕೆ ರೇವಣ್ಣ ಪರ ವಕೀಲರು ಆಕ್ಷೇಪಣೆ ಸಲ್ಲಿಸಿದ್ರು. ಯಾವ ಯಾವ ಕಾರಣಕ್ಕೆ ಜಾಮೀನು ನೀಡಬೇಕು ಎಂದು ಪ್ರತಿವಾದ ಮಂಡಿಸಿದರು.

ಇದನ್ನೆಲ್ಲಾ ಆಲಿಸಿದ ಜಡ್ಜ್, ರೇವಣ್ಣಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದರು. ಈ ಬೆನ್ನಲ್ಲೇ ಜೈಲ್ ಮುಂದೆ ಕಾದು ನಿಂತಿದ್ದ ರೇವಣ್ಣ ಅಭಿಮಾನಿಗಳು ಸಂಭ್ರಮಿಸಿದರು. ಹೊಳೆನರಸೀಪುರದಲ್ಲೂ ಸಂಭ್ರಮ ಕಂಡುಬಂತು.

ದೂರು ನೀಡುತ್ತಾರೆ ಎಂಬ ಕಾರಣಕ್ಕೆ ಸಂತ್ರಸ್ತೆಯನ್ನು ಅಪಹರಿಸಿದ್ದರು. ಇದು ಇತರೆ ಸಂತ್ರಸ್ತೆಯರ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇದೆ. ಈ ಪ್ರಕರಣದಲ್ಲಿ ಸಂತ್ರಸ್ತೆ 164 ಹೇಳಿಕೆ ದಾಖಲು ಮಾಡಿದ್ದಾರೆ. ಈಗಾಗಲೇ ಸಹ ಆರೋಪಿಗಳು ತಪ್ಪೊಪ್ಪಿಗೆ ಮಾಡಿಕೊಂಡಿದ್ದಾರೆ. ಅಪರಾಧ ಕೃತ್ಯದ ಗಂಭೀರತೆ ಪರಿಗಣಿಸಿ ಜಾಮೀನು ನಿರಾಕರಿಸಿ. ಜಾಮೀನು ನೀಡಿದರೆ ಸಾಕ್ಷ್ಯನಾಶ, ಸಾಕ್ಷಿಗಳ ಮೇಲೆ ಪ್ರಭಾವ ಬೀರಬಹುದು.

ಸಂತ್ರಸ್ತೆಯ ಮೇಲೆ ಯಾವುದೇ ಮಾರಣಾಂತಿಕ ಹಲ್ಲೆ ಆಗಿಲ್ಲ. ಮಹಿಳೆಗೆ ಯಾವುದೇ ತೊಂದರೆ ನೀಡಿಲ್ಲ. ಗಾಯಗೊಳಿಸಿಲ್ಲ. ಈ ಕೇಸಲ್ಲಿ ಯಾರಿಗೆ? ಯಾರು ಬೇಡಿಕೆ ಇಟ್ಟಿದ್ದಾರೆ? ಒಬ್ಬರನ್ನ ತಮ್ಮ ವಶದಲ್ಲಿ ಇಟ್ಟುಕೊಳ್ಳುವುದು ತಪ್ಪಲ್ಲ. ಒತ್ತೆಯಾಳಾಗಿಸಿಕೊಂಡು ದೌರ್ಜನ್ಯ, ಕಿರುಕುಳ ನೀಡುವುದು ಮಾತ್ರ ಅಪರಾಧ ಎಂದರು.



ನರೇಂದ್ರ ಮೋದಿ ಅವರು, ದೇಶದ ವಿವಿಧ ಭಾಗಗಳಲ್ಲಿ ಇಡೀ ದಿನ ಕಾರ್ಯಕ್ರಮಗಳು ಮತ್ತು ಕಾಶಿಯಲ್ಲಿ ರೋಡ್ ಶೋ ನಂತರ, ಬಾಬಾ ವಿಶ್ವನಾಥ ದೇವಸ್ಥಾನದಲ್ಲಿ ದರ್ಶನ ಮತ್ತು ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ, ಬಾಬಾ ವಿಶ್ವನಾಥ್ ಅವರ 140 ಕೋಟಿ ಕುಟುಂಬ ಸದಸ್ಯರಿಗೆ ಸಂತೋಷ, ಸಮೃದ್ಧಿ ಮತ್ತು ಕಲ್ಯಾಣಕ್ಕಾಗಿ ಆಶೀರ್ವಾದವನ್ನು ಕೋರಿದರು.

# ಸಿಬಿಎಸ್‌ಸಿ ಫಲಿತಾಂಶ ಪ್ರಕಟ

ನವದೆಹಲಿ: ಸಿಬಿಎಸ್‌ಸಿಯ 12ನೇ ತರಗತಿ ಫಲಿತಾಂಶ ಹೊರಬಿದ್ದಿದ್ದು, ಈ ಬಾರಿ ಕೂಡ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ. ಒಟ್ಟಾರೆ ವಿದ್ಯಾರ್ಥಿಗಳ ಉತ್ತೀರ್ಣ ಫಲಿತಾಂಶ 87.98 ಇದ್ದು, ಕಳೆದ ವರ್ಷಕ್ಕಿಂತ ಅಲ್ಪ ಏರಿಕೆ ಕಂಡಿದೆ. ಕಳೆದ ಬಾರಿಗಿಂತ ಈ ಬಾರಿಯ ಪಾಸಿಂಗ್ ಪರ್ಸೆಂಟೇಜ್ 0.65 ಹೆಚ್ಚಾಗಿದ್ದು, ಕಳೆದ ವರ್ಷ ಉತ್ತೀರ್ಣತೆ ದರ 87.33ರಷ್ಟಿತು.

91.52ರಷ್ಟು ಬಾಲಕಿಯರು ಉತ್ತೀರ್ಣ ಗೊಂಡಿದ್ದು, ಬಾಲಕರ ಉತ್ತೀರ್ಣ ದರಕ್ಕಿಂತ 6.40ರಷ್ಟು ಹೆಚ್ಚು ಅಂಕವನ್ನು ಪಡೆದಿದ್ದಾರೆ. ಒಟ್ಟಾರೆ 24,068 ವಿದ್ಯಾರ್ಥಿಗಳು ಶೇ 95ಕ್ಕಿಂತ ಹೆಚ್ಚಿನ ಅಂಕ ಪಡೆದರೆ, 1,16,145 ವಿದ್ಯಾರ್ಥಿಗಳು ಶೇ 90ಕ್ಕಿಂತ ಹೆಚ್ಚಿನ ಫಲಿತಾಂಶ ಪಡೆದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಫೆಬ್ರವರಿ 15ರಿಂದ ಏಪ್ರಿಲ್ 2ರ ವರೆಗೆ ಪರೀಕ್ಷೆ ನಡೆದಿತ್ತು. ತಿರುವನಂತಪುರ ಅತಿ ಹೆಚ್ಚಿನ ಪಾಸಿಂಗ್ ಪರ್ಸೆಂಟೇಜ್ 99.91 ಹೊಂದಿದ್ದು, ನಂತರದ ಸ್ಥಾನದಲ್ಲಿ 99.04 ವಿಜಯವಾಡ ಇದೆ. ಬೆಂಗಳೂರಿನ ಉತ್ತೀರ್ಣತೆ ದರ 96.95 ಆಗಿದೆ.

# ಹೋರ್ಡಿಂಗ್ ಕುಸಿದು ಮೂವರು ಸಾವು

ಮುಂಬೈ: ಮುಂಬೈನಲ್ಲಿ ಈ ವರ್ಷದ ಮೊದಲ ಮಳೆಯಾಗಿದೆ. ಮುಂಬೈನಲ್ಲಿ ಧೂಳು ಸಹಿತ ಬಿರುಗಾಳಿಯೆದ್ದಿದ್ದು, ಗಾಳಿಯ ರಭಸಕ್ಕೆ ಬೃಹತ್ ಹೋರ್ಡಿಂಗ್ ಕುಸಿದಿದೆ.

ಬೃಹತ್ ಮುಂಬೈ ಮುನ್ಸಿಪಲ್ ಕಾರ್ಪೊರೇಷನ್ ಕಾರ, ಇಂದು ಸಂಜೆ 4.30ರ ಸುಮಾರಿಗೆ ಹೋರ್ಡಿಂಗ್ ಕುಸಿದಿದ್ದರಿಂದ ಸುಮಾರು 100 ಜನರು ಸಿಕ್ಕಿಬಿದ್ದಿದ್ದಾರೆ. ಪಂತ್ ನಗರದ ಪೂರ್ವ ಎಕ್ಸ್‌ಪ್ರೆಸ್ ಹೆದ್ದಾರಿ (ಇಇಹೆಚ್) ಬಳಿ ಇರುವ ಜಾಹೀರಾತು ಫಲಕವು ಪೆಟ್ರೋಲ್ ಪಂಪ್ ಮೇಲೆ ಕುಸಿದಿದೆ. ಇದರಿಂದ ಮೂವರು ಮೃತಪಟ್ಟಿದ್ದು, 59 ಜನರು ಗಾಯ ಗೊಂಡಿದ್ದಾರೆ. ಹೋರ್ಡಿಂಗ್ ಪೆಟ್ರೋಲ್ ಪಂಪ್‌ನ ಸ್ಕ್ಯಾಫೋಲ್ಡಿಂಗ್ ಮತ್ತು ಪಂಪ್‌ನಲ್ಲಿ ನಿಲ್ಲಿಸಿದ್ದ ಕೆಲವು ವಾಹನಗಳನ್ನು ಹಾನಿಗೊಳಿಸಿದೆ.

# 5 ದಿನ ಬಿರುಗಾಳಿ ಮಳೆ ಎಚ್ಚರಿಕೆ

ಬೆಂಗಳೂರು: ರಾಜ್ಯದಲ್ಲಿ ಮುಂದಿನ 5 ದಿನಗಳ ಕಾಲ ಬಿರುಗಾಳಿ, ಗುಡುಗು ಸಹಿತ ಮಳೆಯಾಗಲಿದೆ. ಈ ಸಂಬಂಧ ರಾಜ್ಯದ 10 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಉತ್ತರ ಕರ್ನಾಟಕ ಭಾಗದ ಬಾಗಲಕೋಟೆ, ಕಲಬುರಗಿ, ಯಾದಗಿರಿ, ದಕ್ಷಿಣ ಕರ್ನಾಟಕ ಭಾಗದ ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ, ಮೈಸೂರು ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ.

ಬೆಂಗಳೂರಿನಲ್ಲಿ ಮುಂದಿನ 5 ದಿನಗಳಲ್ಲಿ ಚಂಡಮಾರುತ ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ಮುಖ್ಯವಾಗಿ ಚಿತ್ರದುರ್ಗದಲ್ಲಿ 21 ಮಿ.ಮೀ., ಬೆಂಗಳೂರು ನಗರ 14.4 ಮಿ.ಮೀ., ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣದ ಸುತ್ತಮುತ್ತ 23.4 ಮಿ.ಮೀ. ಹಾಗೂ ಕೊಪ್ಪಳದಲ್ಲಿ 16 ಮಿ.ಮೀ. ಮಳೆ ಸುರಿದಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ರಾಜಧಾನಿ ಬೆಂಗಳೂರಿನಲ್ಲಿ ತಡರಾತ್ರಿ ಸುರಿದ ಬಿರುಗಾಳಿ ಸಹಿತ ಮಳೆಗೆ ಜನರು ತತ್ತರಿಸಿದ್ದಾರೆ. ಸರ್ವಿಸ್ ರಸ್ತೆಗಳು, ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯ ಗುಂಡಿಗಳಲ್ಲಿ ನೀರು ನಿಂತ ಕಾರಣ ವಾಹನ ಸವಾರರು ಪರದಾಡಿದರು.

ಭಾನುವಾರ ಹಾಸನ, ದಾವಣಗೆರೆ, ಮಂಡ್ಯ, ಮೈಸೂರು, ಚಾಮರಾಜನಗರ, ಹಾವೇರಿ, ಬೆಳಗಾವಿ, ಬಾಗಲಕೋಟೆ, ಗದಗ, ವಿಜಯಪುರ ಜಿಲ್ಲೆಗಳ ಕೆಲವೆಡೆ ಗುಡುಗು ಸಹಿತ ಸಾಧಾರಣ ಮಳೆಯಾಗಿದೆ.

ಮುಖ್ಯವಾಗಿ ಚಿತ್ರದುರ್ಗದಲ್ಲಿ 21 ಮಿ.ಮೀ., ಬೆಂಗಳೂರು ನಗರ 14.4 ಮಿ.ಮೀ., ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣದ ಸುತ್ತಮುತ್ತ 23.4 ಮಿ.ಮೀ. ಹಾಗೂ ಕೊಪ್ಪಳದಲ್ಲಿ 16 ಮಿ.ಮೀ. ಮಳೆ ಸುರಿದಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ರಾಜಧಾನಿ ಬೆಂಗಳೂರಿನಲ್ಲಿ ತಡರಾತ್ರಿ ಸುರಿದ ಬಿರುಗಾಳಿ ಸಹಿತ ಮಳೆಗೆ ಜನರು ತತ್ತರಿಸಿದ್ದಾರೆ. ಸರ್ವಿಸ್ ರಸ್ತೆಗಳು, ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯ ಗುಂಡಿಗಳಲ್ಲಿ ನೀರು ನಿಂತ ಕಾರಣ ವಾಹನ ಸವಾರರು ಪರದಾಡಿದರು. ಅವೆನ್ಯೂ ರಸ್ತೆಯಲ್ಲಿ ನೀರು ನುಗ್ಗಿದ್ದು, ಪಾದಚಾರಿಗಳಿಗೆ ತೊಂದರೆ ಉಂಟಾಯಿತು.

ರಾತ್ರಿ ಕೆಲವು ಕಡೆ ದಿಢೀರ್ ವರುಣನ ಆಗಮನದಿಂದಾಗಿ ಜನರು ಮಳೆಯಿಂದ ತಪ್ಪಿಸಿಕೊಳ್ಳ ಹರಸಾಹಸ ಪಟ್ಟರು. ತೀವ್ರ ತಾಪಮಾನ ಏರಿಕೆಯಿಂದಾಗಿ ಬೇಸತ್ತಿದ್ದ ಜನರಿಗೆ ಮಳೆಯಿಂದ ಅಲ್ಪ ತಣ್ಣನೆಯ ಅನುಭವವಾಗಿದೆ.


ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjaneevartheepaper.com

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
14 TUESDAY MAY 2024
14 ಮಂಗಳವಾರ ಮೇ 2024

# ಜಾಲಾರಿ ಗಂಗಮ್ಮ ಧರ್ಮರಾಯಸ್ವಾಮಿ ಹಸಿ ಕರಗ

ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರದ ನಗರದ ಗ್ರಾಮ ದೇವತೆ ಜಾಲಾರಿ ಗಂಗಮಾಂಭ ದೇವರ ಸನ್ನಿಧಿಯಲ್ಲಿ 62 ವರ್ಷಗಳಿಂದ ನಡೆದುಕೊಂಡು ಬಂದಿರುವ ಶ್ರೀ ಧರ್ಮರಾಯಸ್ವಾಮಿ ಹಸೀ ಕರಗ ಮಹೋತ್ಸವ ಗುರುವಾರ ರಾತ್ರಿ ಶ್ರದ್ಧಾ ಭಕ್ತಿಯಿಂದ ನಡೆಯಿತು.

ನಗರದ ಅಯ್ಯಪ್ಪಸ್ವಾಮಿ ದೇವಾಲಯದ ಆವರಣದಿಂದ ಮಂಗಳ ವಾಧ್ಯಗಳ ನಿನಾಧದೊಂದಿಗೆ ರಾತ್ರಿ 9.30ಕ್ಕೆ ಪ್ರಾರಂಭವಾದ ಹಸೀಕರಗ ಮಹೋತ್ಸವ ಕರಗದ ಪೂಜಾರಿ ಧರ್ಮೇಂದ್ರ ಅವರ ನೇತೃತ್ವದಲ್ಲಿ ಸೊಪ್ಪಿನ ಬೀದಿ ಮಾರ್ಗವಾಗಿ ಸಾಗಿದ ಹಸೀಕರಗ ಕಂದವಾರ ಬಾಗಿಲು, ಭುವನೇಶ್ವರಿ ವೃತ್ತವನ್ನು ಬಳಸಿಕೊಂಡು ಗಂಗಮ್ಮ ಗುಡಿಗೆ ತಲುಪಿತು.

ಈ ಹಾದಿಯ ಉದ್ದಕ್ಕೂ ಭಕ್ತಾದಿಗಳು ಕರಗಕ್ಕೆ ಭಕ್ತಿಯಿಂದ ವಂಧಿಸಿ ಪೂಜೆ ಮಾಡುತ್ತಿದ್ದ ದೃಶ್ಯಗಳು ಸಾಮಾನ್ಯವಾಗಿದ್ದವು.

ಕರಗವನ್ನು ಕಂಕುಳಲ್ಲಿ ಹೊತ್ತ ಪೂಜಾರಿ ಧರ್ಮೇಂದ್ರ ತಮಟೆಯ ನಾದಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಾ ಸಾಗುತ್ತಿದ್ದರೆ, ವೀರಗಾರರ ಗೋವಿಂದ ನಾಮಸ್ಮರಣೆ ಸುತ್ತಣ ಪರಿಸರಕ್ಕೆ ಧಾರ್ಮಿಕತೆಯ ಆವರಣವನ್ನು ಹೊದಿಸಿತ್ತು.



ಹಸಿಕರಗ ಹೊರುವ ಪೂಜಾರಿ ಸಂಪ್ರದಾಯಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ನಡೆದುಕೊಂಡು ಬಂದಿರುವ ಪದ್ಧತಿಯಾಗಿದೆ. ಕರಗ ಹೊರುವ ಪೂಜಾರಿ ಗಂಡಾಗಿದ್ದರೂ ಆ ಸಂದರ್ಭಕ್ಕೆ ಶಕ್ತಿದೇವತೆ ಕರಗದಮ್ಮನ ಅವತಾರದಂತೆ ಸ್ತ್ರೀ ವೇಷಧಾರಿಯಾಗಿ ಕಾಣಿಸಿಕೊಳ್ಳುವುದು ಅಗತ್ಯ, ಮಡಿಬಟ್ಟೆಯನ್ನುಟ್ಟು ಪೂಜಾರಿ ಕೈಗೆ ಬಳೆತೊಟ್ಟು ಗಲ್ಲಕ್ಕೆ ಹರಿಸಿಣ, ಹಣೆಗೆ ಕುಂಕುಮ ಇಟ್ಟುಕೊಂಡು ಮುತ್ತೈದೆಯಂತೆ ಕಾಣಿಸಿಕೊಂಡು ಭಕ್ತರ ಭಾವನೆಗಳಿಗೆ ಜೀವತುಂಬುತ್ತಾರೆ.

ಮೇಲೂರಿನ ಧರ್ಮೇಂದ್ರ ಅವರ ಕುಟುಂಬಸ್ಥರೇ ಜಾಲಾರಿ ಗಂಗಮ್ಮ ದೇವರ ಸನ್ನಿಧಾನದಲ್ಲಿ ನಡೆಯುವ ಶ್ರೀ ಧರ್ಮರಾಯಸ್ವಾಮಿ ಕಗರವನ್ನು ಹೊರುವ ಪರಿಪಾಠ ಇಟ್ಟುಕೊಂಡು 62ವರ್ಷಗಳಿಂದ ಮುನ್ನಡೆಸಿಕೊಂಡು ಬಂದಿರುವುದು ವಿಶೇಷವಾಗಿದೆ.

ಈ ವೇಳೆ ಜಾಲಾರಿ ಗಂಗಮ್ಮ ದೇವಾಲಯ ಅಭಿವೃದ್ಧಿ ಸಮಿತಿ ಅಧ್ಯಕ್ಷ ನಗರಸಭಾ ಮಾಜಿ ಅಧ್ಯಕ್ಷ ಮಂಜುನಾಥ್, ಗಂಗಾಧರ ಮೂರ್ತಿ, ರಾಮೂಸ್ ವುಡ್ಸ್ ಅಂಗಡಿಯ ಮಾಲಿಕ ಮಂಜುನಾಥ್, ಮಾಜಿ ನಗರಸಭೆ ಅಧ್ಯಕ್ಷ ಮುನಿಕೃಷ್ಣ, ಮೊಬೈಲ್ ಬಾಬು, ದೇವಾಲಯ ಪೂಜಾರಿ ರಮೇಶ್ ಮತ್ತಿತರರು ಇದ್ದರು.

## ಎಸ್‌ಎಸ್‌ಎಲ್‌ಸಿಯಲ್ಲಿ ಪಿ.ಚಿನ್ಮಯ್‌ಗೆ ಉತ್ತಮ ಅಂಕ



ಶಿವಮೊಗ್ಗ : ಕರ್ನಾಟಕ ರಕ್ಷಣಾ ವೇದಿಕೆ ಯುವ ಸೇನೆ ಶಿವಮೊಗ್ಗ ನಗರಾಧ್ಯಕ್ಷರಾದ ಪ್ರಪುಲ್ಲ ಚಂದ್ರ ಹೆಚ್ ಮತ್ತು ಶ್ರೀಮತಿ ರಾಧರವರ ಮಗನಾದ ಚಿನ್ಮಯ್‌ಪಿ ರವರು ಎಸ್‌ಎಸ್‌ಎಲ್‌ಸಿಯಲ್ಲಿ ಶೇ.88.8 (555 ಅಂಕ) ಪಡೆದು ಶಾಲೆಗೂ–ಪೋಷಕರಿಗೆ ಕೀರ್ತಿ ತಂದಿದ್ದಾರೆ.

ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಹುಂಚದ ಡಾ॥ ಬಿ ಆರ್ ಅಂಬೇಡ್ಕರ್ ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡಿದ್ದಾರೆ. ಇವರ ಈ ಸಾಧನೆಗೆ ಶಾಲಾ ಶಿಕ್ಷಕರು ಮತ್ತು ಸ್ನೇಹಿತರು ಅಭಿನಂದನೆ ಸಲ್ಲಿಸಿದ್ದಾರೆ.



ತಿಪಟೂರು: ತಾಲೂಕಿನ ರಾಮಶೆಟ್ಟಿಹಳ್ಳಿ ಗ್ರಾಮದ ಶ್ರೀ ಕಾಟೀಂದ್ರಮ್ಮ ದೇವಿಯವರ ನೂತನ ದೇವಾಲಯದ ಮಹೋತ್ಸವಕ್ಕೆ ಯುವ ಕಾಂಗ್ರೆಸ್ ಮುಖಂಡ ನಿಖಿಲ್‌ರಾಜ್ ಭೇಟಿ ನೀಡಿ ದೇವಿಯವರ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಹುಚ್ಚಗೊಂಡನಹಳ್ಳಿ ಗ್ರಾ.ಪಂ. ಅಧ್ಯಕ್ಷ ಬಿ.ಬಿ.ಬಸವರಾಜು ಸೇರಿದಂತೆ ಮುಖಂಡರು, ಕಾರ್ಯಕರ್ತರು ಗ್ರಾಮಸ್ಥರು ಹಾಜರಿದ್ದರು.

## ಬಸವೇಶ್ವರರ ತತ್ವಾದರ್ಶ ಪಾಲಿಸಿ: ನರಸಿಂಹ ರೆಡ್ಡಿ



ಬಾಗೇಪಲ್ಲಿ: ಬಸವೇಶ್ವರರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಂಡಾಗ ಬಸವ ಜಯಂತಿ ಅರ್ಥಪೂರ್ಣವೆನಿಸುತ್ತದೆ ಎಂದು ಒಕ್ಕಲಿಗರ ಸಂಘದ ಅಧ್ಯಕ್ಷ ನರಸಿಂಹ ರೆಡ್ಡಿ ಹೇಳಿದರು.

ಪಟ್ಟಣದ ತಹಶಿಲ್ದಾರ್ ಕಛೇರಿಯ ನ್ಯಾಯಾಲಯದ ಸಭಾಂಗಣದಲ್ಲಿ ಬಸವೇಶ್ವರರ ಹಾಗೂ ಹೇಮರೆಡ್ಡಿ ಮಲ್ಲಮ್ಮ ಚಿತ್ರಪಟಕ್ಕೆ ಪುಷ್ಪ ನಮನ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಲೋಕಸಭೆ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆ ಸರಳವಾಗಿ ಬಸವ ಜಯಂತಿ ಆಚರಣೆ ಮಾಡಲಾಯಿತು.

ತದನಂತರ ಮಾತನಾಡಿ ಜಾತ್ಯತೀತ ಸಮಾಜ ನಿರ್ಮಾಣದ ತತ್ವದಲ್ಲಿ ಬಸವಣ್ಣನವರು ಸಾಮಾಜಿಕ ಕ್ರಾಂತಿ ಮಾಡಿದ್ದರು,ಸಮಾಜದ ಅಭಿವೃದ್ಧಿಗಾಗಿ ಹೋರಾಡಿದ್ದರು, ಸಮಾಜ ಸಾಹಿತ್ಯಕ್ಕೆ ಅವರ ಕೊಡುಗೆ ಅಪಾರ ಎಂದು ತಿಳಿಸಿದರು.

ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಸೋಮಶೇಖರ ರೆಡ್ಡಿ ಮಾತನಾಡಿ ಇಡೀ ಮಾನವ ಕುಲದ ಏಳಿಗೆಗೆ ಶ್ರಮಿಸಿದವರು ಬಸವಣ್ಣನವರು.

ಸಮ ಸಮಾಜದ ನಿರ್ಮಾಣಕ್ಕೆ ದುಡಿದು ಜಗತ್ತಿನ ಮೊದಲ ಸಂಸತ್ತು ನಿರ್ಮಿಸಿ ಪ್ರಜಾಪ್ರಭುತ್ವಕ್ಕೆ ನಾಂದಿ ಹಾಡಿದವರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಸೋಮಶೇಖರ್ ರೆಡ್ಡಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಅದ್ಯಕ್ಷ ಗೋವಿಂದ ರೆಡ್ಡಿ, ಇನ್ನೂ ಮುಂತಾದವರು ಪ್ರಮುಖರು ಪಾಲ್ಗೊಂಡಿದ್ದರು.

## ಬಸವೇಶ್ವರ-ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ

ವಿಜಯಪುರ : ವಿಜಯಪುರ ಜಿಲ್ಲಾಡಳಿತದ ವತಿಯಿಂದ ಮೇ.10ರ ಶುಕ್ರವಾರದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಗಜ್ಯೋತಿ ಬಸವೇಶ್ವರ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಿಸಲಾಯಿತು.

ಲೋಕಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಿಲ್ಲಾಡಳಿತದ ವತಿಯಿಂದ ಶುಕ್ರವಾರ ಹಮ್ಮಿಕೊಂಡ ಜಯಂತಿ ಕಾರ್ಯಕ್ರಮವನ್ನು ಅತ್ಯಂತ ಸರಳವಾಗಿ ಶಿಷ್ಟಾಚಾರದಂತೆ ಆಚರಿಸಲಾಯಿತು.

ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ತಹಶೀಲ್ದಾರರಾದ ಕವಿತಾ ಅವರು ಬಸವಣ್ಣನವರ ಹಾಗೂ ಶಿವಶರಣೆ ಹೆಮರೆಡ್ಡಿ ಮಲ್ಲಮ್ಮ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು.

ಇದಕ್ಕೂ ಮೊದಲು ನಗರದ ಬಸವೇಶ್ವರ ವೃತ್ತದಲ್ಲಿರುವ ಬಸವೇಶ್ವರ ಪುತ್ಥಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೊನಾವಣೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.




ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಸಮಾಜದ ಮುಖಂಡರುಗಳಾದ ಶರಣು ಸಬರದ, ಭೀಮರಾಯ ಜಿಗಜಿನ್ನಿ, ಹಣಮಂತ ಮಾಚಪ್ಪನವರ, ಸುರೇಶ ದೇಸಾಯಿ, ಕೆ.ಕೆ.ಬನ್ನೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಧಾರ್ಮಿಕ ಆಚರಣೆಗಳಿಂದ ಮನಸ್ಸಿಗೆ ನೆಮ್ಮದಿ: ಶ್ರೀ ಹನುಮಂತನಾಥ ಸ್ವಾಮೀಜಿ

ಮಧುಗಿರಿ: ಧಾರ್ಮಿಕ ಆಚರಣೆಗಳಿಂದ ಮನಸ್ಸಿಗೆ ನೆಮ್ಮದಿ ದೊರೆಯುವ ಜೊತೆಗೆ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಎಲೆ ರಾಂಪುರದ. ಕುಂಚಿಟಿಗ ಮಠದ ಪೀಠಾಧ್ಯಕ್ಷ ಶ್ರೀ ಹನುಮಂತನಾಥ ಸ್ವಾಮೀಜಿ ತಿಳಿಸಿದರು.



ತಾಲೂಕಿನ ದೊಡ್ಡ ಯಲ್ಕೂರು ಗ್ರಾಮದಲ್ಲಿ ರಾಗಿ ಮಲ್ಲೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಬಸವ ಜಯಂತಿ ಅಂಗವಾಗಿ ನಡೆದ ವಿಶೇಷ ಪೂಜೆ ಮತ್ತು ಧಾರ್ಮಿಕ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು ಗ್ರಾಮಗಳಲ್ಲಿ ದೇವರ ಜಾತ್ರೆ ಹಬ್ಬಗಳನ್ನು ಆಚರಿಸುವ ಮೂಲಕ ಮನಶಾಂತಿ ಧರ್ಮ ಜಾಗೃತಿ ಸಂಘಟನೆ ದೈವಸೇವೆಗಳನ್ನು ನಡೆಸಬೇಕು ಇದರಿಂದ ಗ್ರಾಮಗಳಲ್ಲಿ ಭಕ್ತಿ ಮನೋಭಾವ ಹೆಚ್ಚಾಗಿ ಎಲ್ಲರೂ ಒಂದು ಎಂಬ ಮನೋಭಾವ ಮೂಡುತ್ತದೆ ಹಾಗೂ ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ಸಂಸ್ಕೃತಿ ಧಾರ್ಮಿಕ ಚಿಂತನೆಗಳನ್ನು ಮೂಡಿಸುವುದು ಅವಶ್ಯಕವಾಗಿದೆ ದುಡಿಮೆಯ ಸ್ವಲ್ಪ ಹಣವನ್ನು ಧಾರ್ಮಿಕ ಕಾರ್ಯಗಳಿಗೆ ವಿನಿಯೋಗಿಸಬೇಕು ಮನುಷ್ಯ ಸ್ವಾರ್ಥತೆ ಬಿಟ್ಟು ಎಲ್ಲರೂ ತಮ್ಮವರೇ ಎಂದು ಅರ್ಥೈಸಿಕೊಂಡು ಬದುಕು ಸಾಗಿಸಿ ರಾಗ ದ್ವೇಷ ಅಸೂಯೆ ಬಿಟ್ಟು ಸಹ ಬಾಳ್ವೆ ನಡೆಸುವಂತಗಾಬೇಕು ಪ್ರತಿ ಗ್ರಾಮದಲ್ಲಿ ದೇವಸ್ಥಾನ ಮತ್ತು ಶಾಲೆಗಳು ಅವಶ್ಯಕ ಶಾಲೆ ಮತ್ತು ದೇವಸ್ಥಾನಗಳಿಗೆ ಸ್ಥಿತಿವಂತರು ದಾನ ಧರ್ಮ ಸೇವೆ ಮಾಡುವುದರ ಮೂಲಕ ರಾಜ್ಯಕ್ಕೆ ಮಾದರಿಯಾಗಿ ಬದುಕಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷರಾದ ನಾಗರಾಜು ಪದಾಧಿಕಾರಿಗಳಾದ ಮುರಳಿ ಉಮೇಶ್ ರಾಜಣ್ಣ ಕೃಷ್ಣಪ್ಪ ಮತ್ತಿತರರು ಹಾಜರಿದ್ದರು.

## ಜಾನುವಾರುಗಳಿಗೆ ಮೇವು ತೊಂದರೆಯಾಗದಂತೆ ಕ್ರಮವಹಿಸಿ ಸೂಚನೆ



ಮಧುಗಿರಿ: ತಾಲೂಕಿನಲ್ಲಿ ಇದುವರೆಗೂ ಮೂರು ಮೇವು ಬ್ಯಾಂಕ್‌ಗಳನ್ನು ಪ್ರಾರಂಭಿಸಲಾಗಿದೆ ಎಂದು ಉಪ ವಿಭಾಗಾಧಿಕಾರಿ ಗೋಟೂರು ಶಿವಪ್ಪ ತಿಳಿಸಿದ್ದಾರೆ.

ತಾಲೂಕಿನ ಕೊಡಿಗೇನಹಳ್ಳಿಯ ಗ್ರಾಮದಲ್ಲಿ ಮೇವು ಬ್ಯಾಕ್ ಉದ್ಘಾಟಿಸಿ ಮಾತನಾಡಿ, ಮುಂದಿನ ದಿನಗಳಲ್ಲಿ ಆದ್ಯತೆ ಮೇರೆಗೆ ಪುರವರ, ದೊಡ್ಡೇರಿ, ಕಸಬಾ ಹೋಬಳಿಗಳಲ್ಲಿ. ಮೇವು ಬ್ಯಾಂಕುಗಳನ್ನು ಪ್ರಾರಂಭಿಸಲಾಗುವುದು ಎಂದು ತಿಳಿಸಿದ ಅವರು ಜಾನುವಾರುಗಳಿಗೆ ಮೇವು ತೊಂದರೆ ಆಗದ ರೀತಿಯಲ್ಲಿ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪಶು ಸಂಗೋಪನ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ದನಗೌಡ ಮಾತನಾಡಿ, ಇದುವರೆವಿಗು 15ಟನ್ ಮೇವು ದಾಸ್ತಾನಿದ್ದು 200 ಮೇವು ವಿತರಣಾ ಕಾರ್ಡುಗಳನ್ನು ಕೊಡಿಗೆನಹಳ್ಳಿ ಹೋಬಳಿಯಲ್ಲಿ ವಿತರಿಸಲಾಗಿದ್ದು ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಕಾರ್ಡುಗಳನ್ನು ರೈತರಿಗೆ ವಿತರಿಸಲಾಗುವುದು ಗುಣಮಟ್ಟದ ಮೇವಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಗುಣಮಟ್ಟವಿಲ್ಲದ ಮೇವುಗಳನ್ನು ವಾಪಸ್ ಕಳುಹಿಸಲಾಗುತ್ತಿದೆ ರೈತರಿಗೆ ಮೇವಿನ ವಿತರಣೆಯಲ್ಲಿ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದು ಎಂದು ತಿಳಿಸಿದರು.

ಗ್ರೇಡ್ 2 ತಹಶೀಲ್ದಾರ್ ತಿಪ್ಪೇಸ್ವಾಮಿ, ಕಂದಾಯ ಅಧಿಕಾರಿ ರವೀಂದ್ರ, ಪಶು ಸಂಗೋಪನ ಇಲಾಖೆಯ ವೈದ್ಯರುಗಳಾದ ಜಗದೀಶ್ ಪ್ರದೀಪ್ ಮತ್ತಿತರರು ಹಾಜರಿದ್ದರು.

## ಸಂಗಾಪುರ: ಬಾವಿಯಲ್ಲಿ ಯುವಕನ ಶವ ಪತ್ತೆ

ಕಲಬುರಗಿ: ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಸಂಗಾಪುರ ಗ್ರಾಮದ ಬಾವಿಯೊಂದರಲ್ಲಿ ಯುವಕನೊಬ್ಬನ ಶವ ಪತ್ತೆಯಾಗಿದೆ.

ಜಾವೇದ್ ತಂದೆ ದಸ್ತಗೀರ್ (25) ಎಂಬ ಯುವಕನ ಶವ ಪತ್ತೆಯಾಗಿದ್ದು, ಈ ಸಂಬಂಧ ಜಾವೇದ್ ತಾಯಿ ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಚಾಲಕನಾಗಿ ಕೆಲಸ ಮಾಡುತ್ತಿದ್ದ ಜಾವೇದ್ ಚುನಾವಣೆಯ ದಿನ ರಾತ್ರಿ ನಾಪತ್ತೆಯಾಗಿದ್ದು, ಶುಕ್ರವಾರ ಬೆಳಿಗ್ಗೆ ಶವ ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

ಸುದ್ದಿ ತಿಳಿದು ದೇವಲಗಾಣಗಾಪುರ ಪೊಲೀಸ್ ಠಾಣೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



## ಸಹಕಾರ ಸಂಘಗಳು ಸಂಕಷ್ಟದಲ್ಲಿವೆ: ಡಾಲು ರವಿ

ಕೆ.ಆರ್.ಪೇಟೆ: ಉತ್ಪಾದಕರಾಗಲಿ ಅಥವಾ ಆಡಳಿತ ಮಂಡಳಿಯ ಸದಸ್ಯರಾಗಲಿ ಸಹಕಾರಿ ಸಂಘಗಳಲ್ಲಿ ರಾಜಕೀಯ ಹಾಗೂ ವೈಯಕ್ತಿಕ ಪ್ರತಿಷ್ಠೆಯ ದ್ವೇಷಕ್ಕೆ ಮಹತ್ವ ನೀಡಿದರೆ ಸಹಕಾರ ಸಂಘಗಳು ಸಂಕಷ್ಟಕ್ಕೆ ಸಿಲುಕುವುದು ನಿಶ್ಚಯ ಎಂದು ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕರಾದ ಕೆ.ರವಿ (ಡಾಲು ರವಿ) ತಿಳಿಸಿದರು



ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಚೌಡಸಮುದ್ರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಸಂಭಾಂಗಣದಲ್ಲಿ ಹರಿವು ಮೂಡಿಸುವ ಸಭೆಯಲ್ಲಿ ಮಾತನಾಡಿದರು.ಚೌಡಸಮುದ್ರ ಗ್ರಾಮ ಎಂದರೆ ಜಿಲ್ಲೆ ಮತ್ತು ತಾಲೂಕಿನಲ್ಲಿ ಅತಿ ಹೆಚ್ಚು ಹಾಲು ಉತ್ಪಾದಕರು ನಾಲ್ಕು ಸಾವಿರಕ್ಕೂ ಹೆಚ್ಚು ಲೀಟರ್ ಹಗಲು ಇರುಳು ಶ್ರಮವಹಿಸಿ ಗುಣಮಟ್ಟದ ಹಾಲನ್ನು ಮಂಡ್ಯ ಜಿಲ್ಲಾ ಹಾಲು ಒಕ್ಕೂಟಕ್ಕೆ ಸರಬರಾಜು ಮಾಡುವ ಸಂಘ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಿರಿ, ಈ ಸ್ಥಾನವನ್ನು ಸುಭದ್ರವಾಗಿ ಉಳಿಸಿಕೊಳ್ಳುವುದಕ್ಕೆ ಪ್ರಯತ್ನ ಮಾಡಬೇಕು ಅದನ್ನು ಬಿಟ್ಟು ಆಡಳಿತ ಮಂಡಳಿಯ ಸದಸ್ಯರಲ್ಲಿ ಹಾಗೂ ಕಾರ್ಯದರ್ಶಿಯಲ್ಲಿ ಸಮನ್ವಯವಿಲ್ಲದೆ ವೈಯಕ್ತಿಕ ದ್ವೇಷ ಸ್ಥಳೀಯ ರಾಜಕಾರಣ ಸಮಸ್ಯೆಗಳನ್ನ ಸಹಕಾರಿ ಕ್ಷೇತ್ರಕ್ಕೆ ತಂದು ಉತ್ತಮವಾಗಿ ಹೊರಹಮ್ಮಿರುವ ಸಂಘಕ್ಕೆ ಅಳವಡಿಸಿಕೊಂಡು ಸಂಘದ ಅಭಿವೃದ್ಧಿಯನ್ನು ಕುಂಠಿತಗೊಳಿಸಬೇಡಿ ಎಂದು ಹರಿವು ಮೂಡಿಸಿದರು.ಗ್ರಾಮೀಣ ಪ್ರದೇಶದ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಹಾಗೂ ಕುಟುಂಬದ ಮುನ್ನಡೆಗೆ ಹೆ□ನುಗಾರಿಕೆಯು ವರದಾನವಾಗಿದೆ. ಹೆಣ್ಣು ಮಕ್ಕಳು ವ್ಯರ್ಥವಾಗಿ ಕಾಲಹರಣ ಮಾಡದೆ ಹೆ□ನುಗಾರಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಆರ್ಥಿಕ ಸ್ವಾವಲಂಬನೆ ಸಾಧಿಸಬೇಕು.ಹಣದ ಆಸೆಗೆ ಎಲ್ಲ ಹಾಲನ್ನೂ ಡೆ□ರಿಗೆ ಹಾಕದೆ ಮನೆ ಬಳಕೆಗೆ ಇಟ್ಟುಕೊಂಡು ಉಳಿದ ಹಾಲನ್ನು ಮಾತ್ರ ಡೆ□ರಿಗೆ ಹಾಕಬೇಕು ಎಂದರು.ಬಳಿಕ ಸಂಘದ ನಿರ್ದೇಶಕ ಹರೀಶ್ ಸಿ.ಪಿ ಮಾತನಾಡಿ ಸಂಘದ ಕಾರ್ಯದರ್ಶಿ ಶಿವಪ್ಪ ಅವರು ಕೆಲ ನಿರ್ದೇಶಕರ ಗಮನಕ್ಕೆ ತರದಂತೆ ಸರ್ವಾಧಿಕಾರಿಯಂತೆ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಗಂಭೀರ ಆರೋಪದ ಹಿನ್ನೆಲೆಯಲ್ಲಿ..! ಸಂಘದ ಆಡಳಿತ ಮಂಡಳಿ ಮತ್ತು ಕಾರ್ಯದರ್ಶಿಗಳು ಎರಡು ಮುಖದ ಒಂದು ನಾಣ್ಯ ಇದ್ದಂತೆ ಆ ನಾಣ್ಯ ಚಲಾವಣೆ ಮತ್ತು ಮಹತ್ವವಿರಬೇಕು ಎಂದರೆ ವೈಯಕ್ತಿಕ ದ್ವೇಷ ಬಿಟ್ಟು ಸಾಮರಸ್ಯದಿಂದ ಕಾರ್ಯನಿರ್ವಹಿಸಿದರೆ ಮಾತ್ರ ಸಂಘ ಸದೃಢರಾಗಲು ಸಾಧ್ಯ ಇಲ್ಲದಿದ್ದರೆ ಉತ್ತಮವಾದ ಸಂಘದ ಬೆಳವಣಿಗೆ ಕುಂಠಿತವಾಗಲು ನೀವಿಬ್ಬರೇ ಕಾರಣರಾಗುತ್ತೀರಿ. ಹಾಗಾಗಿ ಆಡಳಿತ ಮಂಡಳಿ ಮತ್ತು ಕಾರ್ಯದರ್ಶಿ ಇಬ್ಬರು ಸಾಮರಸ್ಯದಿಂದ ಸಂಘವನ್ನು ಮತ್ತಷ್ಟು ಸದೃಢಪಡಿಸಿ ಎಂದು ಮನ್ಮುಲ್ ನಿರ್ದೇಶಕ ಕೆ. ರವಿ (ಡಾಲು ರವಿ ) ಹರಿವು ಮೂಡಿಸಿ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಪ್ರಸನ್ನ, ಉಪಾಧ್ಯಕ್ಷೆ ರತ್ನಮ್ಮ ಮಲ್ಲೇಶ್, ನಿರ್ದೇಶಕರಗಳಾದ, ಶಿವಪ್ಪ,ಚಂದ್ರಪ್ಪ,ಚಂದ್ರಶೇಖರ್,ಹರೀಶ್ ಸಿ.ಪಿ, ಕಾಂತರಾಜು,ಮಹೇಶ,ರವೀಶ,ಬೋಜ ಶೆಟ್ಟಿ,ದೀಪ ವೆಂಕಟೇಶ, ಗ್ರಾಮದ ಹಿರಿಯ ಮುಖಂಡರು ಸೇರಿದಂತೆ ಉಪಸ್ಥಿತರಿದ್ದರು ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ



ಅತ್ಯಾಧುನಿಕ ವೈದ್ಯಕೀಯ ಸಾಧನಗಳ ವಿಶ್ವ ದರ್ಜೆಯ ತಯಾರಕ, ಹಿಂದೂಸ್ತಾನ್ ಸಿರಿಂಜ್‌ಗಳು ಮತ್ತು ವೈದ್ಯಕೀಯ ಸಾಧನಗಳು, ಸುರಕ್ಷತೆಯೊಂದಿಗೆ ಅತ್ಯಾಧುನಿಕ ಮತ್ತು ಅದರ ಪ್ರಕಾರದ ಮೊದಲ-ರೀತಿಯ ಡಿಸ್ಪೋಜೆಕ್ಟ್ ಏಕ ಬಳಕೆಯ ಸಿರಿಂಜ್ ಅನ್ನು ಬಿಡುಗಡೆ ಮಾಡಿದೆ. ಸೂಜಿ, ಇದು ಸೂಜಿ ಕಡ್ಡಿ ಗಾಯಗಳಿಂದ ದಾದಿಯರಿಗೆ ಸುರಕ್ಷತೆಯನ್ನು ಖಾತರಿಪಡಿಸುತ್ತದೆ. ಹೆಚ್‌ಎಂಡಿ ಯ ಡಿಸ್ಪೋಜೆಕ್ಟ್ ಸಿರಿಂಜ್ಗಳು ವಿಶ್ವ ದಾದಿಯರ ದಿನದಂದು ದಾದಿಯರ ಪರಿಶ್ರಮ ಮತ್ತು ಸ್ಥಿತಿಸ್ಥಾಪಕತ್ವಕ್ಕೆ ಸೂಕ್ತವಾದ ಗೌರವವಾಗಿದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjaneevartheepaper.com
14 TUESDAY MAY 2024
14 ಮಂಗಳವಾರ ಮೇ 2024

# ಜಮೀನು ಮಾರುವುದನ್ನು ಮೊದಲು ನಿಲ್ಲಿಸಿ: ಆದಿ ಚುಂಚನಗಿರಿ ಶ್ರೀಗಳ ಸಲಹೆ

ಗುಬ್ಬಿ: ಗ್ರಾಮ ಹಾಗೂ ಕೃಷಿ ತೊರೆದು ನಗರದತ್ತ ಹೋಗುವ ಬದಲು ನಮ್ಮ ಒಕ್ಕಲುತನ ಉಳಿಸಿ ಬೆಳೆಸಿ ಧರ್ಮಾಚರಣೆ ಜೊತೆ ಸಮಾಜ ಕಟ್ಟುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಮೊದಲು ಜಮೀನು ಮಾರುವ ಪ್ರವೃತ್ತಿ ಬಿಡಬೇಕು ಎಂದು ಆದಿ ಚುಂಚನಗಿರಿ ಮಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಕರೆ ನೀಡಿದರು.

ತಾಲ್ಲೂಕಿನ ಕಸಬ ಹೋಬಳಿ ಎಸ್. ಕೊಡಗೀಹಳ್ಳಿ ಪಾಳ್ಯ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಶ್ರೀ ಲಕ್ಷ್ಮೀ ವೆಂಕಟೇಶ್ವರ ಕಲ್ಯಾಣ ಮಂಟಪ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು ಜಮೀನು ಮಾರಿ ನಗರ ಸೇರಿದ ಬಳಿಕ ಕೆಲ ಹಳ್ಳಿಗಳು ವೃದ್ಧಾಶ್ರಮದಂತೆ ಕಾಣುತ್ತಿವೆ. ಕೃಷಿ ನಡೆಸಲು ಹಿಂದೇಟು ಹಾಕುವ ಯುವ ಸಮುದಾಯ ಆಧುನಿಕತೆಗೆ ಜೋತು ಬಿದ್ದಿವೆ ಎಂದರು.



ಗ್ರಾಮಗಳಿಂದ ಆರಂಭವಾದ ಕೃಷಿ ದೇಶದ ಆರ್ಥಿಕ ಸುಸ್ಥಿತಿಗೆ ಕಾರಣವಾಗಿದೆ ಎಂಬುದು ಯುವ ಸಮುದಾಯ ಮನಗಾಣಬೇಕಿದೆ. ಕೃಷಿಯೇ ಅತ್ಯುತ್ತಮ ಉದ್ಯೋಗ ಎನಿಸುವ ಕಾಲ ಸನ್ನಿಹಿತವಾಗಿದೆ. ಈ ನಿಟ್ಟಿನಲ್ಲಿ ಜಮೀನು ಮಾರುವ ಚಿಂತನೆ ಬಿಟ್ಟು ಗ್ರಾಮೀಣ ಭಾಗದಲ್ಲಿ ಯುವಕರು ಉದ್ಯೋಗ ಸೃಷ್ಟಿ ಮಾಡಬೇಕು ಎಂದು ಕರೆ ನೀಡಿದ ಶ್ರೀಗಳು ಕೃಷಿ ಶಿಕ್ಷಣ ಅವಶ್ಯವಾಗಿ ಬೇಕಿದೆ. ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಕೂಡಾ ಬಂದೆ ಬರುತ್ತದೆ. ಈ ನಿಟ್ಟಿನಲ್ಲಿ ಒಕ್ಕಲಿಗರು ಒಕ್ಕಲುತನ ಸಂಪ್ರದಾಯಬದ್ಧವಾಗಿ ಮುನ್ನಡೆಸುವುದು ಕೂಡಾ ಒಂದು ಧರ್ಮದ ಕೆಲಸ ಎಂದರು.

ಪ್ರತಿಯೊಂದು ಜೀವಿಯಲ್ಲಿ ಕಾಣುವ ನಾಲ್ಕು ಅವಶ್ಯವಾದ ಆಹಾರ, ನಿದ್ರೆ, ಭಯ ಹಾಗೂ ಮೈಥುನ ನಿಯಮಿತವಾಗಿ ಪ್ರಕ್ರಿಯೆ ನಡೆಯುತ್ತದೆ.

ಹಾಗೆಯೇ ಬದುಕು ಕಟ್ಟಿಕೊಳ್ಳಲು ಅವಶ್ಯ ಉದ್ಯೋಗ ಆಯ್ಕೆ ಮಾಡಬೇಕಿದೆ. ಮೊದಲು ಕೃಷಿ ಪ್ರಧಾನ ನಮ್ಮ ದೇಶದಲ್ಲಿ ಇಂದಿಗೂ ಶೇಕಡಾ 70 ರಷ್ಟು ಕೃಷಿಕ ವರ್ಗವಿದೆ. ಮನುಷ್ಯ ಜನ್ಮ ಮುಕ್ತಿಗಾಗಿ ಎಂಬ ನಂಬಿಕೆ ನಮ್ಮಲ್ಲಿದೆ. ಆ ಕಾರಣ ಮನುಷ್ಯತ್ವದ ಜೀವನ ಸಾಗಿಸಲು ಧಾರ್ಮಿಕಾಚರಣೆ ನಡೆಸಿ ನೆಮ್ಮದಿ ಕಾಣಬೇಕು ಎಂದರು.

ಶಾಸಕ ಎಸ್.ಆರ್.ಶ್ರೀನಿವಾಸ್ ಮಾತನಾಡಿ ಸಂಬಂಧಕ್ಕೆ ಬೆಲೆ ಇಲ್ಲವಾದ ಈ ಕಾಲದಲ್ಲಿ ಅರ್ಧ ದಿನದ ಮದುವೆ ನಡೆಯುತ್ತಿದೆ. ಆದರೂ ಆಡಂಬರ ಮಾತ್ರ ಎಂದಿಗೂ ಬಿಟ್ಟಿಲ್ಲ. ಪ್ರತಿಷ್ಠೆ ಪ್ರದರ್ಶನ ಮಾಡುವ ಮದುವೆಗಳು ಎಂದಿಗೂ ಸರಳ ವಿವಾಹ ಆಗಲಾರದು. ಕಲ್ಯಾಣ ಮಂಟಪ ಗ್ರಾಮದಲ್ಲಿ ಉಪಯೋಗವಾಗಲಿ ಎಂಬ ಹಾರೈಕೆ ನಮ್ಮದು. ಆಧುನಿಕತೆ ಹಿಂದೆ ಓಡುವ ನಮ್ಮ ಇಂದಿನ ಸಮಾಜ ಕೇವಲ ತೋರಿಕೆಗೆ ಸೀಮಿತವಾಗುತ್ತದೆ. ನಮ್ಮ ಸಂಪ್ರದಾಯ, ಸಂಸ್ಕೃತಿ ಉಳಿಸಿ ಬೆಳೆಸುವ ಕೆಲಸ ಗ್ರಾಮಗಳಲ್ಲಿ ನಿರಂತರ ನಡೆಯಲಿ ಎಂದು ಹಾರೈಸಿದರು.

ವೇದಿಕೆಯಲ್ಲಿ ಶ್ರೀ ಮಂಗಳನಾಥ ಸ್ವಾಮೀಜಿ, ಮಾಜಿ ಶಾಸಕ ಎಚ್.ನಿಂಗಪ್ಪ, ಜೆಡಿಎಸ್ ಮುಖಂಡ ಬಿ.ಎಸ್.ನಾಗರಾಜು, ಎಪಿಎಂಸಿ ಮಾಜಿ ಅಧ್ಯಕ್ಷ ಕಳ್ಳಿಪಾಳ್ಯ ಲೋಕೇಶ್, ಸತೀಶ್ ಸುವರ್ಣ, ಯೋಜನಾಧಿಕಾರಿ ರಾಜೇಶ್, ಶ್ರೀ ಲಕ್ಷ್ಮೀ ವೆಂಕಟೇಶ್ವರಸ್ವಾಮಿ ದೇವಾಲಯ ಸಮಿತಿಯ ಎ.ಗೋವಿಂದರಾಜು, ಕೆ.ಎನ್.ವೆಂಕಟೇಗೌಡ, ಮುಖಂಡರಾದ ಗಿರೀಶ್, ಬಸವರಾಜು, ಪ್ರತಾಪ್, ವೆಂಕಟೇಶ್ ಇತರರು ಇದ್ದರು.

# ಸಾರಿಗೆ ಘಟಕದಲ್ಲಿ ಬಸವ ಜಯಂತಿ



ಪಿರಿಯಾಪಟ್ಟಣ : ಘಟಕ ವ್ಯವಸ್ಥಾಪಕರಾದ ದರ್ಶನ್ ರಾಮಚಂದ್ ಅವರ ನೇತೃತ್ವದಲ್ಲಿ ಚಾಲಕರು ನಿರ್ವಾಹಕರು ತಾಂತ್ರಿಕ ಸಿಬ್ಬಂದಿ ಹಾಗೂ ಕಚೇರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿದರು.

ಈ ವೇಳೆ ಘಟಕ ವ್ಯವಸ್ಥಾಪಕರಾದ ದರ್ಶನ್ ರಾಮಚಂದ್ ಹಾಗೂ ಚಾಲಕ ರವಿಶಂಕರ್ ಗುರೂಜಿ ಅವರು ಮಾತನಾಡಿ ಸಮಾಜದಲ್ಲಿ ಆಚರಣೆಯಲ್ಲಿದ್ದ ಸಾಮಾಜಿಕ ಪಿಡುಗುಗಳನ್ನು ತಮ್ಮ ವಚನಗಳ ಮೂಲಕ ಆಡು ಭಾಷೆಯಲ್ಲಿ ಜನರಿಗೆ ಮನದಟ್ಟಾಗುವಂತೆ ತಿಳಿಸಿ ಸಮಾಜದ ಬದಲಾವಣೆಗೆ ಶ್ರಮಿಸಿದ ಮಹಾನ್ ಸಂತರು ಬಸವಣ್ಣ ಅವರಾಗಿದ್ದರು ಎಂದರು.

ಶ್ರೀ ಚಾಮುಂಡೇಶ್ವರಿ ಅಮ್ಮನವರ ಪೂಜೆ ಸಹ ಜರುಗಿ ಅನ್ನಸಂತರ್ಪಣೆ ಮಾಡಲಾಯಿತು, ಈ ಸಂದರ್ಭ ಸಹಾಯಕ ಸಂಚಾರ ಅಧೀಕ್ಷಕರಾದ ಪ್ರಕಾಶ್, ಲೆಕ್ಕ ಪತ್ರ ಮೇಲ್ವಿಚಾರಕಿ ಭಾಗ್ಯಲಕ್ಷ್ಮಿ, ಸಹಾಯಕ ಸಂಚಾರ ನಿರೀಕ್ಷಕ ಸುರೇಶ್, ಪಾರು ಪತ್ತೆಗಾರ ಪ್ರಕಾಶ್, ಸಂಚಾರ ನಿಯಂತ್ರಕ ಮಂಜುನಾಥ್, ಭದ್ರತಾ ಶಾಖೆಯ ನಂದೀಶ್ ಸೇರಿದಂತೆ ಚಾಲಕ ನಿರ್ವಾಹಕ ತಾಂತ್ರಿಕ ಹಾಗೂ ಕಚೇರಿ ಸಿಬ್ಬಂದಿ ಇದ್ದರು.

# ಒಂಟಿ ಸಲಗ ದಾಳಿ ಗಂಭೀರ ಗಾಯ

ಆನೇಕಲ್: ಒಂಟಿ ಕಾಡಾನೆವೊಂದು ರೈತನ ಮೇಲೆ ದಾಳಿ ನಡೆಸಿರುವ ಘಟನೆ ಕರ್ನಾಟಕ ತಮಿಳುನಾಡು ಗಡಿಭಾಗದ ಡೆಂಕಣಿ ಕೋಟೆ ಜರಕಲಟ್ಟಿ ಗ್ರಾಮದಲ್ಲಿ ನಡೆದಿದೆ.

ಜರಕಲಟ್ಟಿ ಗ್ರಾಮದ ವೆಂಕಟಸ್ವಾಮಿ ಕಾಡಾನೆಗೆ ದಾಳಿಗೊಳಗಾದ ವ್ಯಕ್ತಿ. ನಿನ್ನೆ ಸಂಜೆ ಮೇಕೆ ಮತ್ತು ಕುರಿಗಳನ್ನು ಮೇಯಿಸಲು ಕಾಡಂಚಿನ ಪ್ರದೇಶಕ್ಕೆ ಹೋಗಿದ್ರಂತೆ ಆ ಪ್ರದೇಶದಲ್ಲಿ ಕಾಡಾನೆಗಳು ಸಂಚರಿಸುವ ಜಾಗ ಆಗಿತ್ತು.

ಹಾಗಾಗಿ ಆ ಜಾಗದಲ್ಲಿ ಮೇಕೆಮಿಸುತ್ತಿದ್ದಾಗ ಒಂಟಿ ಸಲಗ ಒಂದು ದಾಳಿ ನಡೆಸಿದೆ ಕಾಡಾನೆ ತನ್ನ ಸೊಂಡಲಿನಿಂದ ವೆಂಕಟಸ್ವಾಮಿಯನ್ನ ಎಸೆದು ಕಾಲಿನಿಂದ ತುಳಿದು ಗಾಯಗೊಳಿಸಿದೆ.

ಇನ್ನು ಗಾಯಾಳುನ್ನ ಅಲ್ಲಿನ ಸ್ಥಳೀಯರ ಸಹಾಯದಿಂದ ಆತನನ್ನು ಡೆಂಕಣಿ ಕೋಟೆ ಸರ್ಕಾರಿ ಆಸ್ಪತ್ರೆಗೆ ಕರದೈದು ಚಿಕಿತ್ಸೆ ನೀಡಲಾಗುತ್ತಿದೆ ಇನ್ನ ಆತನ ಸ್ಥಿತಿ ಗಂಭೀರವಾಗಿದ್ದು ಚಿಕಿತ್ಸೆ ನೀಡಲಾಗುತ್ತಿದೆ ಇನ್ನು ಘಟನಾ ಸ್ಥಳಕ್ಕೆ ಅರಣ್ಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡುತ್ತಿದ್ದಾರೆ.

# ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಆದರ್ಶ ಮಹಿಳೆ

ಹಗರಿಬೊಮ್ಮನಹಳ್ಳಿ : ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಪತಿ ಭಕ್ತಿ, ನಿಸ್ವಾರ್ಥ ಸೇವೆ, ದಾಸೋಹಕ್ಕೆ ಉತ್ತಮ ನಿದರ್ಶನ ಹಾಗೂ ಆದರ್ಶ ಮಹಿಳೆ ಎಂದು ತಹಸೀಲ್ದಾರ್ ಚಂದ್ರಶೇಖರ ಶಂಬಣ್ಣ ಗಾಳಿ ತಿಳಿಸಿದರು.

ತಾಲ್ಲೂಕು ಆಡಳಿತದ ವತಿಯಿಂದ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸರಳವಾಗಿ ಏರ್ಪಡಿಸಿದ್ದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತ್ಯುತ್ಸವದಲ್ಲಿ ಭಾಗವಹಿಸಿ ಹೇಮರೆಡ್ಡಿ ಮಲ್ಲಮ್ಮ ಭಾವ ಚಿತ್ರಕ್ಕೆ ಪುಷ್ಪ ಸಮರ್ಪಿಸಿದ ಬಳಿಕ ಅವರು ಮಾತನಾಡಿದರು.

ಈ ವೇಳೆ ತಾಲ್ಲೂಕು ರೆಡ್ಡಿ ಸಮಾಜದ ಅಧ್ಯಕ್ಷ ಬಸವರೆಡ್ಡಿ, ಸಮಾಜದ ಮುಖಂಡರಾದ ಮೈನಳ್ಳಿ ಕೊಟ್ರೇಶಪ್ಪ, ಹ್ಯಾಟಿ ಆನಂದರೆಡ್ಡಿ, ಹನುಮರೆಡ್ಡಿ, ಹೇಮರೆಡ್ಡಿ, ಎನ್. ಸುರೇಶ, ಚಂದ್ರಶೇಖರ್ ರೆಡ್ಡಿ, ಎಸ್.ಬಸವರೆಡ್ಡಿ, ರಾಮರೆಡ್ಡಿ, ಯಂಕಾರೆಡ್ಡಿ, ರಾಜಶೇಖರ ರಡ್ಡಿ, ಹ್ಯಾಟಿ ಮಾರುತೇಶ್ ರೆಡ್ಡಿ, ಸಿಪಿಐ ವಿಕಾಸ ಲಾಮಾಣಿ ಸೇರಿದಂತೆ ತಾಲ್ಲೂಕು ಆಡಳಿತದ ಸಿಬ್ಬಂದಿ ಇತರರು ಇದ್ದರು.



# ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಬಸವಣ್ಣನವರ ಸಂದೇಶಗಳು ದಾರಿದೀಪ: ಧನಂಜಯಕುಮಾರ್

ಕೃಷ್ಣರಾಜಪೇಟೆ: ಕಾಯಕ ತತ್ವದ ಮಹತ್ವವನ್ನು ವಿಶ್ವಕ್ಕೆ ಸಾರಿ, ವಚನಗಳ ಮೂಲಕ ಸಾಮಾಜಿಕ ಕ್ರಾಂತಿ ಮಾಡಿ ಸಮ ಸಮಾಜದ ನಿರ್ಮಾಣಕ್ಕಾಗಿ ಹೋರಾಡಿದ ವಿಶ್ವಜ್ಯೋತಿ ಬಸವಣ್ಣ ನವರ ಜೀವನದ ಆದರ್ಶಗಳನ್ನು ಯುವಜನರು ಕಡ್ಡಾಯವಾಗಿ ಪಾಲಿಸುವ ಮೂಲಕ ಬದಲಾವಣೆಯ ದಿಕ್ಕಿನತ್ತ ಸಾಗಬೇಕು ಎಂದು ತಾಲ್ಲೂಕು ವೀರಶೈವ ಮಹಾಸಭಾದ ಅಧ್ಯಕ್ಷ ವಿ.ಎಸ್. ಧನಂಜಯಕುಮಾರ್ ಹೇಳಿದವರು.

ಪಟ್ಟಣದ ತಾಲ್ಲೂಕು ಆಡಳಿತ ಕಾರ್ಯಸೌಧದ ಸಭಾಂಗಣದಲ್ಲಿ ಆಯೋಜಿಸಿದ್ದ ವಿಶ್ವಗುರು ಬಸವಣ್ಣ ಮತ್ತು ಮಹಾ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿಯ ಅಂಗವಾಗಿ ಇಬ್ಬರೂ ಮಹನೀಯರ ಭಾವ ಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಪೂಜೆ ಮಾಡಿ ಮಾತನಾಡಿದರು.

ಜಾತಿ, ಮತ, ಪಂಥಗಳಿಂದ ಮುಕ್ತವಾದ ಸಮ ಸಮಾಜದ ನಿರ್ಮಾಣಕ್ಕಾಗಿ ವಚನದ ಮೂಲಕ ಕ್ರಾಂತಿ ಮಾಡಿದ ಬಸವಣ್ಣನವರು ಸಮಾಜದಲ್ಲಿ ವಾಸಿಸುವ ಎಲ್ಲರೂ ಮೇಲು ಕೀಳು ಎಂಬ ಬೇಧ ಭಾವವಿಲ್ಲದೆ ಒಂದಾಗಿ ಸಹೋದರರಂತೆ ಬದುಕು ನಡೆಸಬೇಕು ಎಂಬ ಸಂದೇಶ ನೀಡಿದ ಮಹಾನುಭಾವರಾದ ಬಸವಣ್ಣ ಅವರು ನಮಗೆ



ನೀಡಿರುವ ತತ್ವ ಸಂದೇಶಗಳು ಸಾರ್ವಕಾಲಿಕ ಸತ್ಯವಾಗಿವೆ. ಮಹಾಸಾಧ್ವಿ ಮಲ್ಲಮ್ಮ ಅವರು ಸಾಮಾಜಿಕ ಕಟ್ಟು ಪಾಡುಗಳು ಹಾಗೂ ಮೌಢ್ಯಗಳ ವಿರುದ್ಧ ಹೋರಾಟ ನಡೆಸಿ ಸ್ತ್ರೀ ಸ್ವಾತಂತ್ರ್ಯಕ್ಕೆ ಒತ್ತು ನೀಡಿ ಅಕ್ಷರದ ಮಹತ್ವ ಹಾಗೂ ಶಿಕ್ಷಣದ ಶಕ್ತಿಯ ಬಗ್ಗೆ ಜಾಗೃತಿ ಮೂಡಿಸಿದರು ಎಂದು ಸ್ಮರಿಸಿದರು.

ತಹಸೀಲ್ದಾರ್ ಲೋಕೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ನಾಗರಿಕ ಸಮಾಜದಲ್ಲಿ ಜೀವನ ನಡೆಸುತ್ತಿರುವ
ನಾವು ಕಾಯಕಯೋಗಿ ಬಸವಣ್ಣನವರ ಜೀವನ ಸಂದೇಶಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಅನ್ಯಾಯ ಅಕ್ರಮಗಳ ವಿರುದ್ಧ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಕೆ.ಆರ್.ಪೇಟೆ ತಾಲೂಕು ವೀರಶೈವ ಮಹಾಸಭಾದ ಮಾಜಿ ಅಧ್ಯಕ್ಷ ತೋಟಪ್ಪಶೆಟ್ಟಿ, ಮುಖಂಡರಾದ ಬ್ಯಾಂಕ್ ಪರಮೇಶ್ವರ ಕಾರ್ಯಕ್ರಮದಲ್ಲಿ ಮಾತನಾಡಿದರು.

ವೀರಶೈವ ಸಮಾಜದ ಮುಖಂಡರಾದ ಮಾದೇಶ, ವೀರಪ್ಪ, ಸೀಳನೆರೆ ಸತೀಶ್, ಜ್ಞಾನೇಶ್, ರಾಜಸ್ವ ನಿರೀಕ್ಷಕ ಜ್ಞಾನೇಶ್, ಗ್ರಾಮ ಆಡಳಿತ ಅಧಿಕಾರಿ ಜಗದೀಶ್, ಪುರಸಭೆಯ ಆರೋಗ್ಯ ಪರಿವೀಕ್ಷಕ ಅಶೋಕ್, ಬಿಸಿಎಂ ಅಧಿಕಾರಿ ವೆಂಕಟೇಶ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಸರ್ಕಾರಿ ನೌಕರರು ಭಾಗವಹಿಸಿದ್ದರು.

# ಭಾರಿ ಮಳೆ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಪರದಾಟ



ದೇವನಹಳ್ಳಿ : ಗುರುವಾರ ತಡರಾತ್ರಿ ಸುರಿದ ಭಾರಿ ಮಳೆಯ ಪರಿಣಾಮ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ 2ಕ್ಕೆ ನೀರು ನುಗ್ಗಿದೆ. ಟರ್ಮಿನಲ್ ಮೇಲ್ಛಾವಣಿಯಿಂದ ಮಳೆ ನೀರು ಸೋರಿಕೆಯಾಗಿದ್ದು, ಪ್ರಯಾಣಿಕರು ಲಗೇಜ್ ಸ್ವೀಕಾರ ಮಾಡುವ ಬೇ ಪ್ರದೇಶದಲ್ಲಿ ನೀರು ಸಂಗ್ರಹವಾಗಿತ್ತು.

ಇದರಿಂದಾಗಿ ಅಲ್ಲಿದ್ದ ಸಿಬ್ಬಂದಿ ಸೇರಿದಂತೆ ಪ್ರಯಾಣಿಕರು ಕೆಲ ಸಮಯ ಕಿರಿಕಿರಿ ಅನುಭವಿಸಿದರು.

ರಾತ್ರಿ ಸುರಿದ ಧಾರಾಕಾರ ಮಳೆಗೆ ರನ್ ವೇ ಸ್ಪಷ್ಟವಾಗಿ ಕಾಣದಂತಾಗಿ 18ಕ್ಕೂ ಹೆಚ್ಚು ವಿಮಾನಗಳು ಬೇರೆಡೆಗೆ ತಿರುಗಿಸಲಾಯಿತು.

ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಪ್ರಯಾಣಿಕರು ಆಕ್ರೋಶ ಹೊರ ಹಾಕಿದ್ದು, ವಿಮಾನ ನಿಲ್ದಾಣದ ಕಾರ್ ಪಾರ್ಕಿಂಗ್ ಸ್ಥಳವೂ ಮಳೆ ನೀರಿನಿಂದ ತುಂಬಿ ಹೋಗಿದೆ. ಸೂಕ್ತವಾಗಿ ಮಳೆ ನೀರು ಸರಾಗವಾಗಿ ಹರಿಯಲು ಚರಂಡಿ ವ್ಯವಸ್ಥೆ ಇಲ್ಲದಂತಿದೆ.

ಇದನ್ನು ವಿನ್ಯಾಸ ಮಾಡಿ ಎಂಜಿನಿಯರ್, ನಿರ್ಮಿಸಿದ ಗುತ್ತಿಗೆದಾರ ಅಸಮರ್ಥತೆಗೆ ಹಿಡಿದ ಕೈಗನ್ನಡಕಯಾಗಿದೆ ಎಂದು ವೇದಂ ಜಯ ಶಂಕರ್ ಕಿಡಿಕಾರಿದ್ದಾರೆ.

ಇದಕ್ಕೆ ಪ್ರತಿಕ್ರಿಯಿಸಿರುವ ದೀಪ ದೇವಿಕಾ ಒಂದು ಮಳೆಗೆ ವಿಮಾನ ನಿಲ್ದಾಣದ ನಿಜವಾದ ಬಣ್ಣ ಬಯಲಾಗಿದೆ. ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ರಸ್ತೆಗಳು ನೀರಿನಿಂದ ಆವೃತ್ತವಾಗಿದೆ. ಬೀದಿ ದೀಪವಿಲ್ಲದೇ ಮಂಡಿವರೆಗೂ ಹರಿಯುವ ನೀರಿನಲ್ಲಿ ಸಾಗವ ದುಸ್ಥಿತಿಗೆ ತಲುಪಿದ್ದೇವೆ ಎಂದು ಬೇಸರ ಹೊರ ಹಾಕಿದ್ದಾರೆ.

# ತೀರ್ಥಂಕರರ ಸ್ಥಾಪನಾ ದಿನದ ಉತ್ಸವ

ಕಿತ್ತೂರ: ಪುಣ್ಯಕ್ಷೇತ್ರ ಕಸಮಳಗಿಯಲ್ಲಿರುವ (ಕೇಸರಮಳಗಿ) ಶ್ರೀ 1008 ವರಸಿದ್ಧಿ ಪಾರ್ಶ್ವನಾಥ ದಿಗಂಬರ ಜೈನ ಮಂದಿರದಲ್ಲಿ ಭವ್ಯ ಮರುಸ್ಥಾಪನಾ ಉತ್ಸವವನ್ನು ದಿ: 12 ರಂದು ಮುಂಜಾನೆ ಸಮಯ 8 ಗಂಟೆಗೆ ಆಯೋಜಿಸಲಾಗಿದೆ.

ಆ ನಿಮಿತ್ಯ "ನವಗ್ರಹ ದೋಷ" ನಿವಾರಕ ಮತ್ತು "ಸರ್ವಕಾರ್ಯಸಿದ್ಧಿ" ವಿಧಾನ ಆಯೋಜಿಸಲಾಗಿದೆ. ಕಾರಣ ಎಲ್ಲ ಜೈನ ಶ್ರಾವಕ-ಶ್ರಾವಕೀಯರು ಉಪಸ್ಥಿತರಿದ್ದು ಇದರ ಲಾಭ ಪಡೆದುಕೊಳ್ಳಬೇಕೆಂದು ಪಾರ್ಶ್ವನಾಥ ದಿಗಂಬರ ಜೈನ ಅಭಿವೃದ್ಧಿ ಕಮೀಟಿಯವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ: 9448114230, 9448191108, 9845442871 ಸಂಪರ್ಕಿಸಬಹುದು.

# ವಾರ್ಷಿಕೋತ್ಸವ

ಮುನವಳ್ಳಿ: ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ಇಂದು ಮೇ 10 ರಿಂದ ಮೇ 14 ರವರೆಗೆ 23 ನೇ ವರ್ಷದ ವಾರ್ಷಿಕೋತ್ಸವದ ಧಾರ್ಮಿಕ ಕಾರ್ಯಕ್ರಮಗಳು ಜರಗುವುದು. ಸಂಜೆ 6-30 ಕ್ಕೆ ಶ್ರೀ ಸೋಮಶೇಕರ ಮಠದ ಶ್ರೀ ಮುರುಘೇಂದ್ರ ಶ್ರೀಗಳು, ಸತ್ಸಂಗ ಆಶ್ರಮದ ಶ್ರೀ ಮುಕ್ತಾನಂದ ಶ್ರೀಗಳ ದಿವ್ಯಸಾನಿಧ್ಯದಲ್ಲಿ ಪ್ರತಿದಿನ ಸಂಜೆ 6-30 ರಿಂದ 8-30 ರವರೆಗೆ ಹಿಪ್ಪರಗಿಯ ಸಿದ್ಧಾರೋಢ ಶರಣರಿಂದ ಸಿದ್ದಾರೊಡರ ಮಹಾತ್ಮೆಯ ಪ್ರವಚನ ಜರಗುವುದು. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ಸಾಯಿಬಾಬಾ ಕೃಪೆಗೆ ಪಾತ್ರರಾಗಲು ಶ್ರೀ ಸಾಯಿ ಸೇವಾ ಸಮಿತಿಯ ಅಧ್ಯಕ್ಷರು ತಿಳಿಸಿರುವರು.

# ವಿಶೇಷ ಉಪನ್ಯಾಸ

ಸತ್ತೂರು: ಶಂಕರ ಜಯಂತಿಯ ನಿಮಿತ್ತ , ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ, ಉದಯಗಿರಿ ಎರಡನೇ ಸ್ಟಾಪಿನ ಹತ್ತಿರ ಇರುವ ರವೀಂದ್ರ ದೇಸಾಯಿ ಇವರ ಮನೆಯಲ್ಲಿ ಬರುವ ಭಾನುವಾರದಂದು ಅಂದರೆ ದಿನಾಂಕ 12.05.2024 ರಂದು ಸಾಯಂಕಾಲ 6-00 ರಿಂದ 7-00ರ ವರೆಗೆ ಶ್ರೀ ಶಂಕರಾಚಾರ್ಯರ ಜೀವನ ಮತ್ತು ಸಂದೇಶ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಂಪನ್ಮೂಲ ವ್ಯಕ್ತಿಯಾಗಿ ಕುಮಟಾದ ಬಾಳಿಗಾ ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಡಾ. ವಿಶ್ವನಾಥ ಹಂಪಿಹೊಳಿ ಅವರು ಆಗಮಿಸಲಿದ್ದಾರೆ.

ಇದಕ್ಕೂ ಪೂರ್ವ ನಾರಾಯಣಿ ಭಜನಾ ಮಂಡಳಿ ಅವರಿಂದ ಸಾಯಂಕಾಲ 5ರಿಂದ 6ರ ವರೆಗೆ ಭಜನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 63 61 83 57 10ನ್ನು ಸಂಪರ್ಕಿಸಲು ಕೋರಲಾಗಿದೆ.

ಇ-ಪೇಪರ್: www.munjaneevartheepaper.com

ಸ್ಥಳೀಯ

# ಜಿಇ ಏರೋಸ್ಪೇಸ್ ಫೌಂಡೇಶನ್ ಅನ್ನು ಪ್ರಾರಂಭಿಸಿದ ಜಿಇ ಏರೋಸ್ಪೇಸ್

ಬೆಂಗಳೂರು: ಜಿಇ ಏರೋಸ್ಪೇಸ್ ಇತ್ತೀಚೆಗೆ ಜಿಇ ಏರೋಸ್ಪೇಸ್ ಫೌಂಡೇಶನ್ ಅನ್ನು ಆರಂಭಿಸಿದೆ. ಹಳೆಯ ಜಿಇ ಫೌಂಡೇಶನ್‌ನ 100ಕ್ಕೂ ಹೆಚ್ಚು ವರ್ಷಗಳ ಪರಂಪರೆಯನ್ನು ಸಂಭ್ರಮಿಸುವ ನಿಟ್ಟಿನಲ್ಲಿ ಈ ಹೊಸ ಅಧ್ಯಾಯ ಆರಂಭವಾಗಿದೆ. ಜಿಇ ಏರೋಸ್ಪೇಸ್ ಫೌಂಡೇಶನ್‌ನ ಸಮಾಜ ಸೇವಾ ಕಾರ್ಯಗಳು ಜಿಇ ಏರೋಸ್ಪೇಸ್ ಕುಟುಂಬದ "ಜನರನ್ನು ಅಭಿವೃದ್ಧಿಗೊಳಿಸುವ" ಕಂಪನಿಯ ಉದ್ದೇಶವನ್ನು ಪೂರೈಸಲು ಸಹಾಯ ಮಾಡುತ್ತದೆ. ಉದ್ಯೋಗಿಗಳ ತಂಡದ ಅಭಿವೃದ್ಧಿ, ವಿಪತ್ತು ಪರಿಹಾರ ಮತ್ತು ಜಿಇ ಏರೋಸ್ಪೇಸ್ ಉದ್ಯೋಗಿಗಳ ಕಾರ್ಯನಿರ್ವಹಣೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲಸ ಮಾಡಲಿದೆ.

ದಕ್ಷಿಣ ಏಷ್ಯಾದಲ್ಲಿ, ಜಿಇ ಏರೋಸ್ಪೇಸ್ ಫೌಂಡೇಶನ್ ವಿಪತ್ತು ಪರಿಹಾರ ಮತ್ತು ಹಿಂದುಳಿದ ವರ್ಗದ ಸಮುದಾಯಗಳಿಗೆ ಶಿಕ್ಷಣ, ಆರೋಗ್ಯ ಸೇವೆಯನ್ನು ಒದಗಿಸಲು ಸ್ಥಳೀಯ ಪಾಲುದಾರರೊಂದಿಗೆ ಕೆಲಸ ಮಾಡುವುದನ್ನು ಮುಂದುವರಿಸಲಿದೆ. ದಕ್ಷಿಣ ಏಷ್ಯಾವು ಕಳೆದ 10 ವರ್ಷಗಳಲ್ಲಿ ಫೌಂಡೇಶನ್ ಸಂಬಂಧಿತ ಕಾರ್ಯಕ್ರಮಗಳಿಗೆ 1.2 ಮಿಲಿಯನ್ ಯುಎಸ್ ಅನ್ನು ಪಡೆದಿದೆ. ಇದರಲ್ಲಿ ಅನುದಾನಗಳು ಮತ್ತು ಅನುದಾನಿತ ಕಾರ್ಯಕ್ರಮಗಳು ಸೇರಿವೆ. ಇದರಿಂದ ಬೆಂಗಳೂರು, ಪುಣೆ ಮತ್ತು ದಕ್ಷಿಣ ಏಷ್ಯಾದ ಇತರ ಭಾಗಗಳಲ್ಲಿನ ಅಸಹಾಯಕ ಸಮುದಾಯಗಳಿಗೆ ಪ್ರಯೋಜನ ಉಂಟಾಗಿದೆ.

ಈ ಕುರಿತು ಮಾತನಾಡಿರುವ ಜಿಇ ಏರೋಸ್ಪೇಸ್ ನ ಪ್ರೆಸಿಡೆಂಟ್ ಮತ್ತು ಸಿಇಓ ಎಚ್. ಲಾರೆನ್ಸ್ ಕಲ್ಪ್ ಜೂನಿಯರ್, "ನಾವು ವಾಸಿಸುವ ಮತ್ತು ಕೆಲಸ ಮಾಡುತ್ತಿರುವ ಪ್ರದೇಶದ ಸಮುದಾಯಗಳಿಗೆ ನೆರವಾಗುವ ಮತ್ತು ಅವರನ್ನು ಸಬಲೀಕರಣಗೊಳಿಸುವ ಜವಾಬ್ದಾರಿಯನ್ನು ಜಿಇ ಏರೋಸ್ಪೇಸ್ ಗಂಭೀರವಾಗಿ ತೆಗೆದುಕೊಳ್ಳುತ್ತದೆ" ಎಂದು ಹೇಳಿದರು. ಮಾತು ಮುಂದುವರಿಸುತ್ತಾ, "ಜಿಇ ಏರೋಸ್ಪೇಸ್ ಫೌಂಡೇಶನ್ ಕಂಪನಿಯ ಸಮುದಾಯಗಳನ್ನು ಅಭಿವೃದ್ಧಿಗೊಳಿಸಲು ಸಹಾಯ ಮಾಡುತ್ತದೆ ಮತ್ತು ಜಾಗತಿಕ ಪ್ರಮುಖ ಏರೋಸ್ಪೇಸ್ ಕಂಪನಿಯಾಗಿರುವ ನಮ್ಮ ಪರಿಣತಿಯನ್ನು ಬಳಸಿಕೊಳ್ಳುವ ಮೂಲಕ ಭವಿಷ್ಯಕ್ಕಾಗಿ ಸದೃಢವಾದ ಉದ್ಯೋಗಿಗಳನ್ನು ಅಭಿವೃದ್ಧಿಪಡಿಸಲಿದೆ. ಸಕಾರಾತ್ಮಕವಾಗಿ ಪ್ರಭಾವ ಬೀರುವ ಮೂಲಕ 100 ವರ್ಷಗಳ ಪರಂಪರೆಯನ್ನು ಮುಂದುವರಿಸಲು ನಾವು ಹೆಮ್ಮೆಪಡುತ್ತೇವೆ ಮತ್ತು ಜಿಇ ಏರೋಸ್ಪೇಸ್ ಫೌಂಡೇಶನ್ ಮುಂಬರುವ ಹಲವು ವರ್ಷಗಳವರೆಗೆ ಬದಲಾವಣೆ ತರುವುದನ್ನು ಮುಂದುವರೆಸುವುದನ್ನು ನಾನು ಎದುರು ನೋಡುತ್ತಿದ್ದೇನೆ" ಎಂದು ಹೇಳಿದರು.

ಫೌಂಡೇಶನ್‌ನ ಕಾರ್ಯಕ್ರಮಗಳು ಮೂರು ಪ್ರಮುಖ ಕ್ಷೇತ್ರಗಳ ಮೇಲೆ ಗಮನ ಕೇಂದ್ರೀಕರಿಸುತ್ತವೆ ಮತ್ತು 2030ರ ವೇಳೆಗೆ ಹೊಸ ಕಾರ್ಯಕ್ರಮದ ಮೇಲೆ $22 ಮಿಲಿಯನ್‌ಗಿಂತಲೂ ಹೆಚ್ಚು ಹೂಡಿಕೆ ಮಾಡಲಿದೆ. ಉತ್ಪಾದನೆ ಮತ್ತು ಎಂಜಿನಿಯರಿಂಗ್ ಉದ್ಯಮಗಳಲ್ಲಿ ದೃಢವಾದ ಮತ್ತು ವೈವಿಧ್ಯಮಯ ಸಾಮರ್ಥ್ಯದ ಉದ್ಯೋಗಿಗಳನ್ನು ಬೆಳೆಸುವುದು, ಜಾಗತಿಕವಾಗಿ ಪ್ರಭಾವ ಬೀರುವ ಪರಿಣಾಮಕಾರಿತ್ವವನ್ನು ಪ್ರದರ್ಶಿಸುವ ಮಾನವೀಯ ಮತ್ತು ಸಮುದಾಯ ಕಾರ್ಯಕ್ರಮಗಳಲ್ಲಿ ಹೂಡಿಕೆ ಮಾಡುವುದು ಮತ್ತು ವಿಶ್ವಾದ್ಯಂತ ಉದ್ಯೋಗಿಗಳ ಕಾರ್ಯನಿರ್ವಹಣೆಯನ್ನು ಉತ್ತಮಗೊಳಿಸುವ ಕೆಲಸ ಮಾಡಲಿದೆ.

"ಭವಿಷ್ಯಕ್ಕೆ ಸಲ್ಲುವ ಬಲವಾದ ಕಾರ್ಯಪಡೆ, ವಿಪತ್ತು ಪರಿಹಾರ ಮತ್ತು ಉದ್ಯೋಗಿಗಳ ಕಾರ್ಯನಿರ್ವಹಣೆ ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡುವ ನಮ್ಮ ಮುಂದಿನ ಅಧ್ಯಾಯವನ್ನು ಆರಂಭ ಮಾಡಲು ನಾವು ಅಪಾರವಾಗಿ ಹೆಮ್ಮೆಪಡುತ್ತೇವೆ" ಎಂದು ಜಿಇ ಏರೋಸ್ಪೇಸ್ ಫೌಂಡೇಶನ್ ಅಧ್ಯಕ್ಷ ಮೇಘನ್ ಥರ್ಲೋ ಹೇಳಿದರು. ಮಾತು ಮುಂದುವರಿಸಿದ ಅವರು, "ಜಗತ್ತಿನಾದ್ಯಂತ ನಮ್ಮ ಕೆಲಸವನ್ನು ಬೆಂಬಲಿಸುವ ಸಮುದಾಯಗಳನ್ನು ಬೆಳೆಸಲು ಮತ್ತು ಹೆಚ್ಚು ವೈವಿಧ್ಯಮಯ ಮತ್ತು ಕೌಶಲ್ಯಪೂರ್ಣವಾಗಿ ಉದ್ಯಮದ ಅಭಿವೃದ್ಧಿಯನ್ನು ಮಾಡಲು ನಾವು ಎದುರು ನೋಡುತ್ತಿದ್ದೇವೆ" ಎಂದು ಹೇಳಿದರು.

ಫೌಂಡೇಶನ್ 2030ರ ಹೊತ್ತಿಗೆ ನೆಕ್ಸ್ಟ್ ಇಂಜಿನಿಯರ್ಸ್ ಯೋಜನೆಯನ್ನು ವಿಸ್ತರಿಸಲು $20 ಮಿಲಿಯನ್ ಅನ್ನು ಹೂಡಿಕೆ ಮಾಡಲಿದೆ. ಈ ಯೋಜನೆಯು ಎಂಜಿನಿಯರಿಂಗ್‌ನಲ್ಲಿ ಯುವ ಕಾರ್ಮಿಕರ ಪಡೆಯನ್ನು ಹೆಚ್ಚಿಸಲು ಕೆಲಸ ಮಾಡುವ ಜಾಗತಿಕ ಕಾರ್ಯಕ್ರಮವಾಗಿದ್ದು, ಮಾಧ್ಯಮಿಕ ಶಾಲೆ ಮತ್ತು ಕಾಲೇಜಿನ ನಡುವೆ ಇರುವ ಅಂತರವನ್ನು ಕಡಿಮೆ ಮಾಡುತ್ತದೆ. ನೆಕ್ಸ್ಟ್ ಇಂಜಿನಿಯರ್ಸ್ ಕಾರ್ಯಕ್ರಮವು ಇಲ್ಲಿಯವರೆಗೆ ಸುಮಾರು 18,000 ವಿದ್ಯಾರ್ಥಿಗಳನ್ನು ಮುಟ್ಟಿದೆ. ಜಿಇ ಏರೋಸ್ಪೇಸ್ ಫೌಂಡೇಶನ್ ತನ್ನ ಯಶಸ್ವಿ ಕಾರ್ಯಕ್ರಮವಾದ ಸಿನ್ಸಿನಾಟಿ ಕಾರ್ಯಕ್ರಮವನ್ನು 2028ರವರೆಗೂ ವಿಸ್ತರಿಸುವುದಾಗಿ ಇಂದು ಘೋಷಿಸಿತು. ಫೌಂಡೇಶನ್ ನೆಕ್ಸ್ಟ್ ಇಂಜಿನಿಯರ್ಸ್ ಪ್ರೋಗ್ರಾಂ ಅನ್ನು ವಾರ್ಸಾ, ಪೋಲೆಂಡ್ ಸೇರಿದಂತೆ ಹೆಚ್ಚುವರಿಯಾಗಿ ನಾಲ್ಕು ನಗರಗಳಿಗೆ ವಿಸ್ತರಿಸುವುದಾಗಿ ಘೋಷಣೆ ಮಾಡಿದೆ. ಮುಂಬರುವ ವರ್ಷಗಳಲ್ಲಿ ಇನ್ನೂ ಹೆಚ್ಚುವರಿ ನಗರಗಳನ್ನು ಘೋಷಿಸಲಾಗುವುದು.

ಬೆಳೆಯುತ್ತಿರುವ ವಾಯುಯಾನ ಮತ್ತು ಉತ್ಪಾದನಾ ಕ್ಷೇತ್ರದ ಬೇಡಿಕೆಗಳಿಗೆ ಅನುಗುಣವಾಗಿ ಜಿಇ ಏರೋಸ್ಪೇಸ್ ಫೌಂಡೇಶನ್ ತಾವು ಇರುವ ಮತ್ತು ಕೆಲಸ ಮಾಡುವ ಭೌಗೋಳಿಕ ಪ್ರದೇಶಗಳಲ್ಲಿನ ಉದ್ಯೋಗಿಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲು $2 ಮಿಲಿಯನ್ ದೇಣಿಗೆ ನೀಡುತ್ತದೆ.

# ತಾಯಂದಿರ ದಿನಾಚರಣೆ ಅಂಗವಾಗಿ "ಅಮ್ಮ ನಮನ

ಮುಂಜಾನೆ ವಾರ್ತೆ ಸುದ್ದಿ

ತಾಳಿಕೋಟಿ: ಶಿಕ್ಷಣವಂತರಾಗಬಹುದು ಸಂಸ್ಕಾರವಂತರಾಗದಿದ್ದರೆ ಫಲವಿಲ್ಲ. ಶಿಕ್ಷಣದ ಜೊತೆಗೆ ನಮ್ಮ ಮಕ್ಕಳಲ್ಲಿ ಸಂಸ್ಕೃತಿ ಸಂಸ್ಕಾರಗಳನ್ನು ಮೂಡಿಸುವ ತಾಯಿ ನಮನ ಕಾರ್ಯಕ್ರಮ ಆಯೋಜಿಸಿರುವುದು ಸ್ತುತ್ಯಾರ್ಹವಾಗಿದೆ ಎಂದು ಮಕ್ಕಳ ವೈದ್ಯ ಡಾ.ಐ.ಬಿ ತಳ್ಳೊಳ್ಳಿ ಹೇಳಿದರು ಅವರು ಪಟ್ಟಣದ ವಿದ್ಯಾಕಾಶಿ ಕರಿಯರ ಅಕಾಡೆಮಿ ವತಿಯಿಂದ ತಾಯಂದಿರ ದಿನಾಚರಣೆ ಅಂಗವಾಗಿ "ಅಮ್ಮ ನಮನ" ಕಾರ್ಯಕ್ರಮವನ್ನು ಪಟ್ಟಣದ ಹಳೆ ನೀರಿನ ಟಾಕಿ ಹತ್ತಿರ ಇರುವ ರಿಲಾಯನ್ಸ್ ಸ್ಕೂಲ್ ಆವರಣದಲ್ಲಿ ಸೋಮವಾರ ಮಾತನಾಡಿದರು. ಇಂದು ಬಾಲ್ಯ ವಿವಾಹ ಹೆಚ್ಚುತ್ತಿದ್ದು ಉತ್ತಮ ಶಿಕ್ಷಣ



ಕೊಡಿಸುವುದರತ್ತಲೂ ಚಿತ್ತ ಹರಿಸಬೇಕು.

ವೆಬ್ ಕ್ಯಾಮೆರಾದ ಭಯದಲ್ಲೂ ರಾಜ್ಯಕ್ಕೆ ಎಸ್.ಎಸ್.ಎಲ್.ಸಿಯಲ್ಲಿ ಮೊದಲ ರ್ಯಾಂಕ್ ಪಡೆದವಳು ಬಡತನದಲ್ಲಿಯೇ ಜನಿಸಿದ ಬಾಲಕಿಯಂಬುದನ್ನು ಮರೆಯಬಾರದು. ಹೆತ್ತವರು ಮನೆಯಲ್ಲಿ ಮಕ್ಕಳಿಗೆ ನೀತಿ ಶಿಕ್ಷಣ ನಿಡಿ, ದುಶ್ಚಟಗಳನ್ನು ಮಾಡದಿರಿ, ಮಕ್ಕಳು ನಮ್ಮನ್ನು ಅನುಕರಿಸುತ್ತಾರೆ ಆದ್ದರಿಂದ ಉತ್ತಮ ನಡತೆ ತೋರಿ ಎಂದರು.

ಮುಖ್ಯ ಅತಿಥಿಗಳಾಗಿ ಬ.ಸಾಲವಾಡಗಿ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಸುಮಂಗಲಾ ಕೋಳೂರ, ತಾಯಿ ಕೊಡುವ ಸಂಸ್ಕಾರದಿಂದಲೇ ನಿಜವಾದ ವ್ಯಕ್ತಿತ್ವ ರೂಪಗೊಳ್ಳುತ್ತದೆ ಎಂಬುದಕ್ಕೆ ಸಾವಿರ ಸಾಕ್ಷ್ಯಗಳಿವೆ. ತಾಯಿಯಿಂದ ಚಂದ್ರಶೇಖರ ಸುಬ್ರಮಣ್ಯಂನವರಲ್ಲಿ ಒಡಮೂಡಿದ್ದ ಉತ್ತಮ ವ್ಯಕ್ತಿತ್ವದಿಂದಲೇ ಅವರನ್ನು ಸಿ.ವಿ.ರಾಮನ್ ಅವರು ಗುರುತಿಸಲು ಸಾಧ್ಯವಾಯಿತು ಎಂದರು. ಕವಯತ್ರಿ ಶಿವಲೀಲಾ ಮ ಮುರಾಳ ತಾಯಿ ಮಕ್ಕಳೊಂದಿಗೆ ಗರ್ಭದಲ್ಲಿಯೇ ಕರುಳುಬಳ್ಳಿ ಸಂಬಂಧ ಇಟ್ಟುಕೊಂಡು ಬೆಳೆಸುತ್ತಾಳೆ ಅವಳ ಋಣ ತೀರಿಸಲಾಗದ್ದು ಎಂದರು. ಸುಶ್ರಾವ್ಯ ಕಂಠದಿಂದ ಅಮ್ಮನ ಕುರಿತ ಹಾಡುಗಳನ್ನು ಹೇಳಿ ಮನತಣಿಸಿದರು.

ದಿವ್ಯ ಸಾನಿಧ್ಯವನ್ನು ವಹಿಸಿದ್ದ ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮ ಸ್ವಾಮೀಜಿ ಹಾಗೂ ಶರಣೆ ಕಾಶಿಬಾಯಿ ಭಂಟನೂರ ಅಮ್ಮನವರು ಆಶೀರ್ವಚನ ನೀಡಿದರು..

ಅಧ್ಯಕ್ಷತೆಯನ್ನು ರಿಲಾಯನ್ಸ್ ಸೊಸೈಟಿ ಅಧ್ಯಕ್ಷ ರಹೆಮಾನ್ ನಮಾಜಕಟ್ಟಿ ವಹಿಸಿದ್ದರು. ವೇದಿಕೆಯಲ್ಲಿ ಉಪಾಧ್ಯಕ್ಷ ಈರಣ್ಣ ಸೋಮಜಾಳ ಮಹಾಂತೇಶ ಮುರಾಳ ಇದ್ದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರನ್ನು ಗೌರವಿಸಲಾಯಿತು.

ಮಕ್ಕಳಿಂದ ತಾಯಂದಿರ ಪಾದಪೂಜೆಯನ್ನು ಮಾಡಿಸಿ ಹೆತ್ತವರನ್ನು ಗೌರವಿಸುವ ಸಂಸ್ಕಾರ ನೀಡಲಾಯಿತು. ವಿದ್ಯಾಕಾಶಿ ಶಿಕ್ಷಣಸಂಸ್ಥೆ ಅಧ್ಯಕ್ಷ ಮುತ್ತು ಕುಂಟೋಜಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮೈನುದ್ದಿನ್ ಬಾಗಲಕೋಟ ನಿರ್ವಹಿಸಿದರು.

ವರದಿ ಸುನೀಲ್ ಎಲ್ ತಳವಾರ ಮುಂಜಾನೆ ವಾರ್ತೆ ತಾಳಿಕೋಟಿ



## ಬಂಡೀಪುರ ಸಫಾರಿಗೆ 3 ದಿನಕ್ಕೆ 16ಲಕ್ಷ ಆದಾಯ 2 ಸಾವಿರ ಪ್ರವಾಸಿಗರು ಸಫಾರಿ ವೀಕ್ಷಣೆ

ಗುಂಡ್ಲುಪೇಟೆ:ದೇಶದ ಪ್ರತಿಷ್ಠಿತ ರಾಷ್ಟ್ರೀಯ ಉದ್ಯಾನವನಕ್ಕೆ ಎರಡು ಸಾವಿರ ಪ್ರವಾಸಿಗರು ಭೇಟಿ ಲಕ್ಷಾಂತರ ರೂಪಾಯಿ ಆದಾಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ಈಗ ಮತ್ತಷ್ಟು ಕಳೆಗಟ್ಟಿದೆ ಪ್ರಧಾನಿ ನರೇಂದ್ರ ಮೋದಿ ಭೇಟಿ ಬಳಿಕ ಇಲ್ಲಿಗೆ ಪ್ರವಾಸಿಗರ ದಂಡೇ ಹರಿದುಬರುತ್ತಿದೆ



ಮೂರು ದಿನಗಳ ನಿರಂತರ ರಜಾದಿಂದಾಗು 2 ಸಾವಿರ ಪ್ರವಾಸಿಗರು ಬಂಡೀಪುರಕ್ಕೆ ಭೇಟಿ ನೀಡಿ ಸಫಾರಿ ವೀಕ್ಷಣೆ ಮಾಡಿದ್ದಾರೆ ಒಟ್ಟು 16 ಲಕ್ಷ ರೂಪಾಯಿ ಹಣದ ಸಂಗ್ರಹವಾಗಿದೆ ಇದರಲ್ಲಿ 20 ಜನ ವಿದೇಶಿ ಪ್ರವಾಸಿಗರು ಸೇರಿಕೊಂಡು ಪ್ರತಿ ನಿತ್ಯ 700 ಜನರ ಭೇಟಿ ನೀಡುತ್ತಿದ್ದು ಸಫಾರಿಯಿಂದಲೇ ಪ್ರತಿ ದಿನ 4 ರಿಂದ 5 ಲಕ್ಷ ರೂಪಾಯಿ ಆದಾಯ ಸಂಗ್ರಹವಾಗುತ್ತಿದೆ. ಪ್ರವಾಸಿಗರ ಹೆಚ್ಚಳದಿಂದ ಅರಣ್ಯ ಇಲಾಖೆಯ ಆದಾಯ ದಲ್ಲಿಯೂ ಹೆಚ್ಚಳವಾಗುತ್ತಿದೆ.

2023ರ ಏಪ್ರಿಲ್ 9ರಂದು ಪ್ರಧಾನಿ ನರೇಂದ್ರ ಮೋದಿ ಅವರು ಬಂಡಿಪುರದಲ್ಲಿ ಸಫಾರಿ ನಡೆಸಿದ್ದರು. ಪ್ರಾಜೆಕ್ಟ್ ಟೈಗರ್‌ನ 50ನೇ ವರ್ಷಾಚರಣೆ ಹಿನ್ನೆಲೆಯಲ್ಲಿ ಬಂಡೀಪುರದಲ್ಲಿ ಹುಲಿ ಸಂರಕ್ಷಣೆ ಸಂಬಂಧಿತ ಕಾರ್ಯಕ್ರಮ ಮತ್ತು ಹುಲಿಗಣತಿ ಬಿಡುಗಡೆ ಸೇರಿದಂತೆ ಹಲವು ಕಾರಣಗಳಿಗಾಗಿ ಅವರು ಆಗಮಿಸಿದ್ದರು. ಈ ವೇಳೆ ಮೋದಿ ಸುಮಾರು 2 ಗಂಟೆ ಕಾಲ ಬಂಡೀಪುರ ಉದ್ಯಾನವನ ವನ್ನುಸುತ್ತಿದ್ದರು ಸಾರ್ವಜನಿಕರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯು 4 ಹೊಸ ವಾಹನಗಳನ್ನು ಖರೀದಿಸಿದೆ ಸಫಾರಿಗಾಗಿ ಮತ್ತೆ 2 ಬಸ್ 2 ಜೀಪ್‌ಗಳನ್ನು ಖರೀದಿ ಮಾಡಲಾಗಿದೆ.

ಬಂಡೀಪುರದಲ್ಲಿ ಪ್ರತಿದಿನ ಎರಡು ಬಾರಿ ಸಫಾರಿ ನಡೆಸಲಾಗುತ್ತದೆ. ಇಲ್ಲಿ ಎರಡು ರೀತಿಯ ಸಫಾರಿಗೆ ಅವಕಾಶವನ್ನು ಕಲ್ಪಿಸಲಾಗಿದ್ದು, ಬಸ್ ಹಾಗೂ ಜೀಪ್ ವ್ಯವಸ್ಥೆ ಇದೆ. ಬಸ್‌ನಲ್ಲಿ ಹೆಚ್ಚಿನ ಜನರು ಒಮ್ಮೆಲೆಗೆ ಹೋಗಬಹುದಾ ಗಿದ್ದು 1 ಗಂಟೆಯ ಅವಧಿ

ಯನ್ನು ಹೊಂದಿರುತ್ತದೆ ಜೀಪ್ ಸಫಾರಿಯಲ್ಲಿ ಸರಿಸುಮಾರು 2 ಗಂಟೆಗಳ ಅವಧಿ ಇರುತ್ತದೆ. ಈ ಎರಡೂ ಸಫಾರಿಗಳು ಬೆಳಗ್ಗೆ 6 ರಿಂದ 9 ಮತ್ತು ಮಧ್ಯಾಹ್ನ 3 ರಿಂದ 6 ಗಂಟೆ ನಡುವೆ ಕಾರ್ಯನಿರ್ವಹಿಸುತ್ತವೆ. ಇನ್ನು ನೀವು ಕ್ಯಾಮೆರಾಗಳನ್ನು ಕೊಂಡೊಯ್ಯುವುದಾದರೆ ಅದಕ್ಕೆ ಹೆಚ್ಚುವರಿ ಶುಲ್ಕವಿರುತ್ತದೆ. ವರದಿ: ಮಹದೇವಪ್ರಸಾದ್ ಹಂಗಳ

## ವಿವಿಧ ಸಂಘಟನೆಗಳಿಂದ ಎಂಎಲ್ ಹಳ್ಳಿಯಲ್ಲಿ ಬಿದಿರು ಬೆಳೆ ಕರ್ಯಾಗಾರ

ಸಾಗರ: ಹವ್ಯಕ ಅಭಿವೃದ್ಧಿ ಪ್ರತಿಷ್ಟಾನ (ರಿ) ಕೆಳದಿ ಸೀಮೆ, ಎಂ.ಎಲ್. ಹಳ್ಳಿಯ ಶ್ರೀ ಗಂಗಾ ವಿಶ್ವೇಶ್ವರ ಸೇವಾ ಪ್ರತಿಷ್ಟಾನ (ರಿ), ಶ್ರೀಧರಪುರ ಗೌರಮ್ಮ ಲಕ್ಷ್ಮಯ್ಯ ಟ್ರಸ್ಟ್ ವತಿಯಿಂದ ಮೇ 18ರಂದು ಎಂ.ಎಲ್. ಹಳ್ಳಿಯ ಎಲ್.ಟಿ. ತಿಮ್ಮಪ್ಪ ಹೆಗಡೆ ಸಭಾ ಭವನದಲ್ಲಿ ಬಿದಿರು ಬೆಳೆಯ ಕುರಿತು ಮಾಹಿತಿ ಕರ್ಯಾಗಾರವನ್ನು ಆಯೋಜಿಸಲಾಗಿದೆ.

ಅಂದು ಮಧ್ಯಾಹ್ನ 4 ಗಂಟೆಯಿಂದ ನಡೆಯುವ ಕರ್ಯಕ್ರಮದಲ್ಲಿ ಕಣಜ ಬಿದಿರು ಬೆಳೆಗಾರ ಸಂಘದ ಸಂಪನ್ಮೂಲ ವ್ಯಕ್ತಿ ರಾಮಚಂದ್ರ ಭಟ್ ಕರ್ಕಿಕೊಪ್ಪರವರು ಬಿದಿರು ಬೆಳೆಯುವ ಬಗ್ಗೆ ಸೂಕ್ತ ಮಾಹಿತಿ ಹಾಗೂ ಮಾರ್ಗದರ್ಶನ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಕಣಜ ಟ್ರಸ್ಟಿನವರು ಎಕರೆಗೆ 60 ಸೀಮೆ ಬಿದಿರು ಸಸಿ ವಿತರಿಸಲಿದ್ದಾರೆ. ಜಮೀನಿನ ಪಹಣಿ, ಆಧಾರ್ ಕಾರ್ಡ್ ನಕಲು, ಬ್ಯಾಂಕ್ ಪಾಸ್ ಬುಕ್ ನಕಲು, ಅರಣ್ಯ ಇಲಾಖೆಯ ಸಸ್ಟೇನಬಲ್ ಪ್ರಮಾಣ ಪತ್ರಗಳನ್ನು ಆಸಕ್ತ ರೈತರು ಒದಗಿಸಬೇಕಾಗುತ್ತದೆ. ಆಸಕ್ತರು ಆಗಮಿಸಬೇಕೆಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವರದಿ.ರಾಘವೇಂದ್ರ ತಾಳಗುಪ್ಪ





ಗುರುವಿಲ್ಲದೆ, ಜೀವನದ ಅರ್ಥವಾಗಲಿ ಅಥವಾ ಜ್ಞಾನದ ಸಾಧನೆಯಾಗಲಿ ಸಾಧ್ಯವಿಲ್ಲ ಎಂದು ಚಿಕ್ಕರೂಗಿಯ ಈರಣ್ಣ ಶಾಸ್ತ್ರಿಗಳು ಮಾತನಾಡಿದರು. ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ ಕಲ್ಮೇಶ್ವರ ದೇವಸ್ಥಾನದಲ್ಲಿ ಬಸಣ್ಣ ಮಹಾರಾಜರು ಹಂಜಿಯವರ ಸಪ್ತಾಹ ಕಾರ್ಯಕ್ರಮ ಜರುಗಿತು. ನಮ್ಮ ಮೊದಲ ಗುರು ತಾಯಿ ನಮಗೆ ಜೀವ ನೀಡಿ ಲೌಕಿಕ ಮೌಲ್ಯಗಳನ್ನು ಪರಿಚಯಿಸಿದಂತೆ ಒಬ್ಬ ಗುರು ಮಾತ್ರ ಜ್ಞಾನ ಮತ್ತು ಭಗವಂತನ ಸಾಧನೆಯ ಮಾರ್ಗವನ್ನು ತೋರಿಸಬಲ್ಲ ಎಂದು ಎಸ್ ಎನ್ ಮಂಗೊಂಡ ಮಾತನಾಡಿದರು. ಬ್ರಹ್ಮಸ್ವರೂಪಿ ನಿರಾಕಾರ ಕಣ್ಣಿಗೆ ಕಾಣುವುದಿಲ್ಲ ನಿಜವಾದ ವಸ್ತುವನ್ನು ತೋರಿಸುವವನೆ ನಿಜವಾದ ಗುರು ಅಖಂಡ ಧ್ಯಾನದಿಂದಲೇ ನಾವು ಆ ದೇವರನ್ನು ಕಾಣಬಹುದು ಎಂದು ವಿಲಾಸರಾವ ಮಹಾರಾಜರು ಮಾತನಾಡಿದರು. ಬಿ ಡಿ ತೊದಲಬಾಗಿ ದಾನಯ್ಯ ಸತ್ತಿಗೇರಿ ರಾಮು ಚಪ್ಪರ ಎಸ್ ಬಿ ಕಡಬಿ ಬಿ ಎಂ ದೇವನಾಯಕ ಬಸವರಾಜ್ ಬರಾಡಿ ಕಲ್ಲಪ್ಪ ಹಂಜಿ ಮಹಾದೇವ ಹಂಜಿ ಮತ್ತಿತರರು ಇದ್ದರು.

## 2023-24ನೇ ಸಾಲಿನ ಎಸ್.ಎಸ್. ಎಲ್. ಸಿ,ಪಿ.ಯು.ಸಿ ಯಲ್ಲಿ ಅತಿ ಹೆಚ್ಚು ಅಂಕ

ಕೆ.ಆರ್.ಪೇಟೆ: ತಾಲೂಕಿನ ಹೆಸರಾಂತ ಸಮಾಜ ಸೇವಕ ಹಾಗೂ ಆರ್.ಟಿ. ಓ ಅಧಿಕಾರಿಗಳ ರಾಜ್ಯಾಧ್ಯಕ್ಷ ಆರ್.ಟಿ.ಓ ಮಲ್ಲಿಕಾರ್ಜುನ್ ರವರ ಹುಟ್ಟು ಹಬ್ಬದ ಪ್ರಯುಕ್ತ ಮೇ 20 ರಂದು ಸೋಮವಾರ 2023-24ನೇ ಸಾಲಿನ ಎಸ್. ಎಸ್. ಎಲ್. ಸಿ,ಪಿ.ಯು.ಸಿ



ಯಲ್ಲಿ ಅತಿ ಹೆಚ್ಚು ಅಂಕ ಪಡೆದ ತಾಲೂಕಿನ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ದೇವಾಲಯಗಳಲ್ಲಿ ವಿಶೇಷ ಪೂಜೆ ಕಾರ್ಯಕ್ರಮ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳೊಂದಿಗೆ ಅರ್ಥಪೂರ್ಣವಾಗಿ ಹುಟ್ಟು ಹಬ್ಬ ಆಚರಿಸಲು ನಿರ್ಧರಿಸಿದ್ದೇವೆ ಎಂದು ಆರ್‌ಟಿಓ ಮಲ್ಲಿಕಾರ್ಜುನ್ ಅಭಿಮಾನಿ ಬಳಗದ ಅಧ್ಯಕ್ಷ ಗಂಜಿಗೆರೆ ಮಹೇಶ್ ತಿಳಿಸಿದರು.

ಪಟ್ಟಣದ ಜಯನಗರ ಬಡಾವಣೆಯಲ್ಲಿರುವ ಆರ್‌ಟಿಓ ಮಲ್ಲಿಕಾರ್ಜುನ್ ಅವರ ಕಚೇರಿಯಲ್ಲಿ ಮಾತನಾಡಿದರು. ತಾಲೂಕಿನಲ್ಲಿ ನಿರಂತರ ಸಮಾಜ ಸೇವೆ ಮೂಲಕ ನೊಂದವರಿಗೆ ಸೇವಾ ಮನೋಭಾವನೆಯಿಂದ ಸ್ಪಂದಿಸುವ ಕಾಯಕದೊಂದಿಗೆ ಪರಿಚಿತರಾಗಿರುವ ಸಮಾಜ ಸೇವಕ ಆರ್ ಟಿ ಓ ಮಲ್ಲಿಕಾರ್ಜುನ್ ಅಭಿಮಾನಿಗಳ ಬಳಗದ ವತಿಯಿಂದ ಅವರ ಹುಟ್ಟು ಹಬ್ಬದ ಪ್ರಯುಕ್ತ ತಾಲೂಕಿನ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಅಭಿಮಾನಿಗಳಿಂದ ಸಸಿ ನೆಟ್ಟು.

ಮತ್ತು 2023-24 ನೇ ಸಾಲಿನ ಎಸ್. ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ.95 ಅಂಕ ಗಳಿಸಿದ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.90 ಅಂಕ ಗಳಿಸಿದ ಮತ್ತು ತಾಲೂಕಿನ ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡಿ ಪರೀಕ್ಷೆಯಲ್ಲಿ ಗರಿಷ್ಠ ಅಂಕಗಳನ್ನು ಗಳಿಸಿದ ಇಬ್ಬರು ವಿದ್ಯಾರ್ಥಿಗಳಿಗೆ ಮತ್ತು ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಲಾ ವಿಭಾಗ, ವಾಣಿಜ್ಯ ವಿಭಾಗ ಮತ್ತು ವಿಜ್ಞಾನ ವಿಭಾಗಗಳ ಪರೀಕ್ಷೆಯಲ್ಲಿ ಗರಿಷ್ಠ ಅಂಕಗಳನ್ನು ಗಳಿಸಿದ ಇಬ್ಬರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಜೊತೆಗೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳೊಂದಿಗೆ ಹುಟ್ಟುಹಬ್ಬ ಆಚರಿಸಲಿದ್ದೇವೆ ಎಂದರು.

ಪ್ರತಿಭಾವಂತ ಮಕ್ಕಳು ಸಲ್ಲಿಸಬೇಕಾದ ದಾಖಲಾತಿಗಳ ವಿವರ

1) ಅರ್ಜಿ (ಅಭಿಮಾನಿ ಬಳಗದ ಕಚೇರಿಯಲ್ಲಿ ಪಡೆದುಕೊಳ್ಳುವುದು)

2) 2 ಭಾವ ಚಿತ್ರ

3) ಮಾರ್ಕ್ಸ್ ಕಾರ್ಡ್ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಂದ ದೃಢೀಕೃತ ಪ್ರತಿ.

4) ಆಧಾರ್ ಕಾರ್ಡ್ ಜೆರಾಕ್ಸ್.

ದಿನಾಂಕ: 17-5-2024 ರ ಸಂಜೆಯೊಳಗೆ ಭರ್ತಿ ಮಾಡಿದ ಅರ್ಜಿ ಸಲ್ಲಿಸಬೇಕು.

ಅರ್ಜಿ ದೊರೆಯುವ ಸ್ಥಳ ಮತ್ತು ಅರ್ಜಿ ಸಲ್ಲಿಸಬೇಕಾದ ವಿಳಾಸ

ಆರ್.ಟಿ.ಓ ಮಲ್ಲಿಕಾರ್ಜುನ್ ಅಭಿಮಾನಿ ಬಳಗ (ರಿ) ಕೆ.ಆರ್.ಪೇಟೆ

ನಳಂದ ಕಾನ್ವೆಂಟ್ ಹತ್ತಿರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ರಸ್ತೆ, ಜಯನಗರ, ಕೆ.ಆರ್.ಪೇಟೆ.ಹೆಚ್ಚಿನ ಮಾಹಿತಿಗಾಗಿ ಆರ್.ಟಿ.ಓ ಮಲ್ಲಿಕಾರ್ಜುನ್ ಅಭಿಮಾನಿ ಬಳಗ ಅಧ್ಯಕ್ಷರಾದ ಮಹೇಶ್ ಗಂಜಿಗೆರೆ ದೂರವಾಣಿ ಸಂಖ್ಯೆ: 9731279740 / 08230- 200235. ಸಂಪರ್ಕಿಸಿಸಬೇಕು ಹಾಗೂ ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಮತ್ತು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಸೋಮಶೇಖರ್, ಹೊಸಹೊಳಲು ವಿಜಿಯಣ್ಣ,ಮಾರ್ಗೋನಹಳ್ಳಿ ಯೋಗೇಶ್, ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ

## ಪಿಎಲ್‌ಡಿ ಬ್ಯಾಂಕ್ ವಿರುದ್ಧ ನಿರ್ದೇಶಕರ ಪ್ರತಿಭಟನೆ

ಮದ್ದೂರು: ಪಟ್ಟಣದ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನ (ಪಿಕಾರ್ಡ್ ಬ್ಯಾಂಕ್) ಅಧ್ಯಕ್ಷರು ಮತ್ತು ವ್ಯವಸ್ಥಾಪಕರು ಸರ್ವಾಧಿಕಾರಿ ಧೋರಣೆ ನಡೆಸುವ ಮೂಲಕ ಬ್ಯಾಂಕ್ ನ ಅಭಿವೃದ್ಧಿಗೆ ಅಡ್ಡಿ ಪಡಿಸುತ್ತಿದ್ದಾರೆ ಎಂದು ಆರೋಪಿಸಿ ಸಂಘದ ಕೆಲ ನಿರ್ದೇಶಕರು ಹಾಗೂ ಷೇರುದಾರರು ಬ್ಯಾಂಕ್ ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಬ್ಯಾಂಕ್‌ನ ಅಧ್ಯಕ್ಷ ಹಾಗೂ ವ್ಯವಸ್ಥಾಪಕರ ವಿರುದ್ಧ ಘೋಷಣೆಗಳನ್ನು ಕೂಗಿ ಸೋಮವಾರ ಆಕ್ರೋಶ ವ್ಯಕ್ತಪಡಿಸಿದರು.




ಸಂಘದ ನಿರ್ದೇಶಕ ಕೆ.ಬಿ.ಸಿದ್ದೇಗೌಡ ಮಾತನಾಡಿ, ಮೇ. 6 ರಂದು ಬ್ಯಾಂಕ್ ನ ಆಡಳಿತ ಮಂಡಳಿ ಸಭೆಯಲ್ಲಿ ಭಾಗವಹಿಸಿ ವಿಷಯ 1, ಮತ್ತು 2 ಕ್ಕೆ ಒಪ್ಪಿಗೆ ನೀಡಿ, ನಂತರ ವಿಷಯ 3 ರಿಂದ 11 ವರೆಗಿನ ವಿಷಯಗಳನ್ನು ತಿರಸ್ಕರಿಸಿದ್ದು ಈ ಬಗ್ಗೆ ಆಡಳಿತ ಮಂಡಳಿ ಸಭೆಯಲ್ಲಿ ಅಧ್ಯಕ್ಷರಿಗೆ ನೀಡಿದ್ದು, ಅದಕ್ಕೆ ಅಧ್ಯಕ್ಷರು ನಮ್ಮ ಪತ್ರಕ್ಕೆ ಸಹಿ ಹಾಕಿ ಸಭೆಯನ್ನು ಮುಂದೂಡುತ್ತೇನೆಂದು ಹೇಳಿದ ಮೇಲೆ ನಾವುಗಳು ಸಭೆಯಿಂದ ಹೊರ ಬಂದೆವು ಎಂದರು.

ನಂತರ ನಾವು ಬ್ಯಾಂಕಿನಿಂದ ಹೊರ ಬಂದ ನಂತರ ಅಧ್ಯಕ್ಷರು ಮತ್ತು ವ್ಯವಸ್ಥಾಪಕರು ಇವರುಗಳೇ ನಡವಳಿಕೆಗಳನ್ನು ಬರೆದುಕೊಂಡು ತಿರ್ಮಾನ ಕೈಗೊಂಡಿದ್ದು, ಆಡಳಿತ ಮಂಡಳಿ ನಿರ್ದೇಶಕರಿಗೆ ಅವಮಾನ ಮಾಡಿದ್ದರೆಂದು ಆಕ್ರೋಶ ಹೊರ ಹಾಕಿದರು.

ಬ್ಯಾಂಕ್ ನಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಂಬಂಧರಿಗೆ ಪತ್ರ ಬರೆದಿದ್ದರೂ ಸಹ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಬ್ಯಾಂಕ್ ಈಗಾಗಲೇ ನಷ್ಟದಲ್ಲಿದ್ದು ಅಡಳಿತ ಮಂಡಳಿ ಈ ಬಗ್ಗೆ ಕ್ರಮ ಕೈಗೊಳ್ಳುತ್ತಿದ್ದರೂ ಬ್ಯಾಂಕಿ ಅಧ್ಯಕ್ಷರು ಹಾಗೂ ವ್ಯವಸ್ಥಾಪಕರು ಬ್ಯಾಂಕಿನ ನಿಯಮಗಳನ್ನು ಗಾಳಿಗೆ ತೂರಿ ತಮ್ಮಿಷ್ಟಬಂದಂತೆ ನಡೆದುಕೊಳುತ್ತಿದ್ದಾರೆ ಎಂದು ಆರೋಪಿಸಿದರು.

ಬ್ಯಾಂಕ್ನ ನಿರ್ದೇಶಕರಾದ ಸಿದ್ದರಾಮು, ಗೌರಮ್ಮ, ಸಿದ್ದಮರಿಗೌಡ, ಕೃಷ್ಣ, ಸವಿತಾ, ಕೃಷ್ಣಪ್ಪ, ಮುಖಂಡರಾದ ಮಾರಸಿಂಗನಹಳ್ಳಿ ಕೃಷ್ಣೇಗೌಡ ಇತರರು ಇದ್ದರು.

## ಹುಬ್ಬಳ್ಳಿ : ಕಾಯಕದಲ್ಲಿ ನಿಷ್ಠೆ ತೋರಬೇಕು ಜಕ್ಕಪ್ಪನವರ

ಹುಬ್ಬಳ್ಳಿ: ಸದಾವಕಾಲವೂ ಕಾಯಕದಲ್ಲಿ ನಿರತವಾಗಿರುವ ಬಂಟ ಸಮುದಾಯವು ಹೋಟೆಲ್ ಉದ್ಯಮದಲ್ಲಿ ಮಹತ್ತರ ಬದಲಾವಣೆ ತಂದು ಹುಬ್ಬಳ್ಳಿ ಧಾರವಾಡ ಜನತೆಯ ಮನಸೂರೆಗೊಂಡಿದೆ ಎಂಬುದಕ್ಕೆ ಹಲವಾರು ಉದಾಹರಣೆಗಳು ನಮ್ಮಕಣ್ಣು ಮುಂದಿವೆ ಎಂದು ಹಿರಿಯ ಕಾಂಗ್ರೆಸ್ ನಾಯಕಎಫ್.ಎಚ್.ಜಕ್ಕಪ್ಪನವರ ಹೇಳಿದರು.

ಸತ್ತೂರ ಬಳಿ ರೆಡ್ ಪೋರ್ಟ್ ನಲ್ಲಿ ನೂತನ ರೆಸ್ಟೋರೆಂಟ್ ಉದ್ಘಾಟಿಸಿ ಅವರು ಮಾತನಾಡಿದರು. ಶುಚಿ,ರುಚಿಗೆ ಶೆಟ್ಟಿ ಸಮುದಾಯದವರು ನೀಡುವ ಸೇವೆ ಅಮೋಘವಾದುದು. ಗ್ರಾಹಕರ ಅಭಿರುಚಿಗೆ ತಕ್ಕಂತೆ ನೀಡುವ ಅವರ ಅಹಾರ ವಿಭಿನ್ನ ಶೈಲಿಯು ಜನಮನ ಗೆದ್ದಿದೆ ಎಂದು ಸಂತಸ ವ್ಯಕ್ತಪಡಿಸಿದರು.



ಬೃಹತ್ ಹಾಗೂ ಅತ್ಯಂತ ಸುಂದರವಾದ ರೆಡ್ ಪೋರ್ಟ್ ನಲ್ಲಿ ಗ್ರಾಹಕರಿಗೆ ತಕ್ಕಂತೆ ಉನ್ನತ ಶೈಲಿಯ ವಸತಿ ಗ್ರಹಗಳು,ಉಟೋಪಚಾರವನ್ನು ಕುಟುಂಭ ಸಮೇತ ತೆರಳಿ ಸವಿ,ರುಚಿಯ ಉಪಯೋಗ ಪಡೆಯಬಹುದಾಗಿದೆ. ಅತ್ಯಂತ ವಿಶಾಲ,ಸುಂದರ ವೈವಿದ್ಯಮಯ ಅಲಂಕಾರಿಕ ಡಿಸೈನ್ ಗಳು ರೆಡ್ ಪೋರ್ಟ್ ನಲ್ಲಿರುವುದು ವಿಶೇಷವಾಗಿದೆ.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಎಲ್ಲಾ ಬಂಟ ಸಮುದಾಯದವರು ಸಾಮೂಹಿಕ ಭಾವ ಚಿತ್ರ ಮೂಡಿಸಿಕೊಂಡರು.ಬೆಳಿಗ್ಗೆ ಲಕ್ಷ್ಮೀ, ಸರಸ್ವತಿ,ವಿಘ್ನೇಶ್ವರನ ಪೂಜೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಕೃಷ್ಣ ಗುರೂಜಿ,ಸುಗ್ಗಿ ಸುಧಾಕರಶೆಟ್ಟಿ,ಯತಿರಾಜ್ ಶೆಟ್ಟಿ,ಜಯರಾಂ ಶೆಟ್ಟಿ, ಪಂಚಾಕ್ಷರಯ್ಯ ಹಿರೇಮಠ,ಹರಿ,ಓಂ ಸುಧಾಕರ, ಮಹೇಶ ಶೆಟ್ಟಿ, ಅಶೋಕ ಶೆಟ್ಟಿ,ನವೀನ ಶೆಟ್ಟಿ,ಆಲೂರ ಸತೀಶ,ಶೆಟ್ಟಿ,ಉದಯ ಶೆಟ್ಟಿ, ಗಣೇಶ ಆರ್.ಶೆಟ್ಟಿ,ಮಂಜು ಶೆಟ್ಟಿ,ಗಣ್ಯಶ ಸಿ.ಶೆಟ್ಟಿ,ವೀರೇಶ ಪ್ರಳಯಕಲ್ಮಠ ಸಹಿತ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಪ್ರಾಧ್ಯಾಪಕರಿಂದ ವಿಶೇಷ ತರಗತಿ.

ಇತ್ತೀಚಿನ ದಿನಗಳಲ್ಲಿ ಮೊಬೈಲ್ ಗೀಳಿಗೆ ಬೀಳುವ ವಿದ್ಯಾರ್ಥಿಗಳು ಸೋಮಾರಿಗಳಾಗುತ್ತಿದ್ದು ಇದನ್ನು ತಪ್ಪಿಸುವ ಉದ್ದೇಶದಿಂದ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಅಧ್ಯಾಪಕರು ವಿನೂತನ ಪ್ರಯೋಗಗಳಿಗೆ ಮುಂದಾಗಿದ್ದರು. ಮೊಬೈಲ್ ಹಿಡಿದರೆ ಜಗತ್ತೇ ಮರೆಯುವ ವಿದ್ಯಾರ್ಥಿಗಳ ನಿರ್ಲಕ್ಷ [illegible]ತನ ಹೋಗಲಾಡಿಸಲು, ಶಿಕ್ಷಣದ ಜತೆಯಲ್ಲಿ ಇತರ ಚಟುವಟಿಕೆಗಳಲ್ಲಿ ಆಸಕ್ತಿ ಮೂಡಿಸುವ ಭಾಗವಾಗಿ ಶನಿವಾರ ಕಾಲೇಜಿನಲ್ಲಿ ಸ್ವಚ್ಚತಾ ಅಭಿಯಾನದ ಜತೆ ಪರಿಸರ ಸಂರಕ್ಷಣೆಯ ಪಾಠ ಮಾಡಲಾಯಿತು.

ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ವಿದ್ಯಾರ್ಥಿಗಳ ಬಿಡುವಿನ ಅವಧಿಯಲ್ಲಿ ಆವರಣ ಸ್ವಚ್ಚ ಮಾಡುವುದು, ಸುತ್ತಮುತ್ತಲಿನ ಪರಿಸರ ಸಂರಕ್ಷಿಸುವುದು, ಗಿಡ ನೆಡುವುದು, ಮೊದಲಾದ ಕಾರ್ಯಗಳನ್ನು ಮಾಡಿಸಲಾಯಿತು. ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಸುರೇಶ್ ಜಂಬಾನಿ, ಮಮತಾ ಹೆಗಡೆ ಮತ್ತು ದೈಹಿಕ ಶಿಕ್ಷಕ ಕೊಟ್ರೇಶ್‌ರ ನೇತೃತ್ವದಲ್ಲಿ ಕಾಲೇಜಿನ ಮುಂಭಾಗದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರ್ವಜನಿಕರು ಓಡಾಡಲು ಹಾಗೂ ವಾಹನಗಳು ಹತ್ತಲು ಸ್ವಲ್ಪ ಅಡಚಣೆಯಾಗಿದ್ದು, ಅದನ್ನು ಸರಿಪಡಿಸಲಾಯಿತು. ಇದೆ ಸಮಯದಲ್ಲಿ

ಸಾಗರದ ಸರಕಾರಿ ಪದವಿ ಕಾಲೇಜು ವಿದ್ಯಾರ್ಥಿಗಳು ಸ್ವಚ್ಚತಾ ಕರ್‍ಯ ನಡೆಸಿದರು.

ವರದಿ ರಾಘವೇಂದ್ರ ತಾಳಗುಪ್ಪ



MUNJANEVARTHE KANNADA DAILY, EDITOR, PRINTER PUBLISHED And OWNED BY H.L.Amaranth, and Printed at: Sree Manjunatha enterprises, No.30Subbannachan Lane 1st Cross, Cottenpet Bangalore-560053, MOB: **91414 14119** Published at: No.97, 2nd Cross, Vivekananda Nagar, Khadi commision layout, BSK 3rd Stage, Katharaguppe Main Road, Bangalore 560085